ನಮ್ಮ ಜನ
NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 207 | Volume - 01 Issue - 207
ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | Title- Code: KARKAN 28269
ಚಿತ್ರದುರ್ಗ | Chitradurga
ದಿನಾಂಕ: 04–03–2024 ಸೋಮವಾರ | Date: 04-03-2024 Monday
ಪುಟ: 4 | Page: 4
ಬೆಲೆ : ರೂ.2–00 | Price: Rs. 2-00

ಒಳಪುಟದ ಸುದ್ದಿಗಳು
ಇಂದಿನಿಂದ ರಾಜ್ಯ ಗುತ್ತಿಗೆದಾರರ ಸಂಘ ಸಮ್ಮೇಳನ, ಜಿಲ್ಲೆಯಿಂದ 350 ಜನ 2
ಸಾರ್ವಜನಿಕ ಆಸ್ಪತ್ರೆ ಆವರಣದಲ್ಲಿ ನಿಂತಿದ್ದ ಮೋಟಾರ್ ಬೈಕ್‌ಗಳ ತೆರವು 3
49 ಕೋಟಿ ರೂ. ವೆಚ್ಚದ ಕಾಮಗಾರಿಗೆ ಸಚಿವ ಡಿ. ಸುಧಾಕರ್ ರಿಂದ ಶಂಕುಸ್ಥಾಪನೆ 4

ಸುದ್ದಿ, ಜಾಹಿರಾತಿಗೆ 9686622252

### ಶುಭ ನುಡಿ

ಬಟ್ಟೆ ನೋಡಿ ಗೆಳೆತನ ಮಾಡಬೇಡ, ಗುಣ ನೋಡಿ ಗೆಳೆತನ ಮಾಡು , ಯಾಕೆಂದರೆ ಬಟ್ಟೆ ಹರಿದು ಹೋಗುವ ತನಕ ಮಾತ್ರ ಇರುತ್ತದೆ, ಗುಣ ಸಾಯುವವರೆಗೂ ಇರುತ್ತದೆ !!

» ಶುಭೋದಯ

# ವಿವಿದೆಡೆ ಪಲ್ಸ್ ಪೋಲೀಯೋ ಅಭಿಯಾನ

## ಪಲ್ಸ್ ಪೋಲಿಯೋ ಲಸಿಕೆ ಮಕ್ಕಳಿಗೆ ತಪ್ಪದೇ ಹಾಕಿಸಿ: ಕೆ.ಸಿ.ವೀರೇಂದ್ರ ಪಪ್ಪಿ



» **ಚಿತ್ರದುರ್ಗ**

ಚಿತ್ರದುರ್ಗ ಜಿಲ್ಲಾಸ್ಪತ್ರೆ ಆವರಣದಲ್ಲಿ ಪಲ್ಸ್ ಪೊಲಿಯೋ ಲಿಸಕಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಚಿತ್ರದುರ್ಗ ಇವರ ವತಿಯಿಂದ ಚಿತ್ರದುರ್ಗದ ಜಿಲ್ಲಾಸ್ಪತ್ರೆ ಆವರಣದಲ್ಲಿ ರಾಜ್ಯ ಸರ್ಕಾರದ ಆದೇಶದಂತೆ 0 ಯಿಂದ 5 ವರ್ಷದ ಒಳಗಿನ ಮಕ್ಕಳಿಗೆ ಪಲ್ಸ್ ಪೋಲಿಯೊ ಲಸಿಕೆ ಹಾಕುವ ಕಾರ್ಯಕ್ರಮ ಹಮ್ಮಿಕೊಂಡಿದ್ದು ಶಾಸಕ ಕೆ ಸಿ ವೀರೇಂದ್ರ ಪಪ್ಪಿ ಹಾಗೂ ಜಿಲ್ಲಾಧಿಕಾರಿ ವೆಂಕಟೇಶ್ ಟಿ ಅವರು ಆಗಮಿಸಿ ಖುದ್ದು ಮಕ್ಕಳಿಗೆ ಪೋಲಿಯೊ ಲಸಿಕೆ ಹಾಕುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆಯನ್ನ ನೀಡಿದ್ದಾರೆ.

ಇನ್ನೂ ಈ ವೇಳೆ ಶಾಸಕ ಕೆ ಸಿ ವೀರೇಂದ್ರ ಪಪ್ಪಿ ಅವರು ಮಾತನಾಡಿದ್ದು ಪೋಲಿಯೊ ಮುಕ್ತ ರಾಷ್ಟ್ರ ಮಾಡಲು ಅಭಿಯಾನ ನಡೆಯುತ್ತಿದೆ.

2009 ರಿಂದ ನಮ್ಮ ರಾಜ್ಯದಲ್ಲಿ ಯಾವುದೇ ಪೋಲಿಯೊ ಪ್ರಖರಣಗಳು ಇಲ್ಲದಿರುವುದು ದೊಡ್ಡ ಹೆಮ್ಮೆಯ ವಿಷಯವಾಗಿದೆ. ನಮ್ಮ ವೈಧ್ಯರು ದೊಡ್ಡ ಸಾಧನೆ ಮಾಡಿದ್ದಾರೆ. ಅಕ್ಕಪಕ್ಕದ ರಾಷ್ಟ್ರಗಳಲ್ಲಿ ಇನ್ನು ಪೋಲಿಯೊ ಪ್ರಖರಣಗಳು ಪತ್ತೆಯಾಗುತ್ತಿದ್ದು ಹಾಗಾಗಿ ಇಲ್ಲಿ ಅಭಿಯಾನ ಆರಂಬ ಮಾಡಿದ್ದೇವೆ. ಸದೃಡ ಆರೋಗ್ಯವಂತ ಮಕ್ಕಳು ಇರಬೇಕು ಎನ್ನುವ ಉದ್ದೇಶದಿಂದ ಸರ್ಕಾರ ಈ ಕಾರ್ಯಕ್ರಮ ಮಾಡುತ್ತಿದ್ದು ಕಳೆದ ಹಲವು ದಿನಗಳಿಂದ ನಮ್ಮ ಇಲಾಖೆ ಇದಕ್ಕೆ ಶ್ರಮಿಸುತ್ತಿದ್ದು ಪೋಷಕರು ಇದಕ್ಕೆ ಸಹಕರಿಸಬೇಕು ಎಂದು ಕೆ ಸಿ ವೀರೇಂದ್ರ ಪಪ್ಪಿ ತಿಳಿಸಿದ್ದಾರೆ.

ಜಿಲ್ಲಾಧಿಕಾರಿ ವೆಂಕಟೇಶ್ ಟಿ ಅವರು ಮಾತನಾಡಿದ್ದು ಪೋಲಿಯೊ ಮುಕ್ತ ರಾಷ್ಟ್ರ ಮಾಡು ಉದ್ದೇಶದಿಂದ ಸರ್ಕಾರಗಳು ಪೋಲಿಯೊ ಲಸಿಕಾ ಅಭಿಯಾನವನ್ನ ಹಮ್ಮಿಕೊಂಡಿವೆ. ಪ್ರಸ್ತುತ ಜಿಲ್ಲೆಯಲ್ಲಿ ಪೋಲಿಯೊ ಪ್ರಕರಣಗಳು ಇರುವುದಿಲ್ಲ.

ಪುಟ 2

## ಆರೋಗ್ಯ ಇಲಾಖೆಯೊಂದಿಗೆ ಎಲ್ಲರೂ ಕೈಜೋಡಿಸಿ: ರಘುಮೂರ್ತಿ



» **ಚಳ್ಳಕೆರೆ**

ಆಗತಾನೇ ಜನಿಸಿದ ಶಿಶುವಿನಿಂದಐದು ವರ್ಷದ ಪ್ರತಿಯೊಂದು ಮಗುವಿಗೆ ಎರಡು ಹನಿ ಪೋಲಿಯೋ ಡ್ರಾಫ್ ಹಾಕಿಸಿದಲ್ಲಿ ಆ ಮಗುವಿನ ಆರೋಗ್ಯ ಸದೃಢವಾಗುತ್ತದೆ. ಪ್ರಾಣಕ್ಕೆ ಅಪಾಯವನ್ನುಂಟು ಮಾಡುವ ಯಾವುದೇ ರೋಗಗಳು ಮಗುವಿನತ್ತ ಸುಳಿಯುವುದಿಲ್ಲ. ಶಿಶು ಮತ್ತು ಐದು ವರ್ಷದೊಳಗಿನ ಮಕ್ಕಳಿಗೆ ಪೋಲಿಯೋ ಹಾಕಿಸುವ ಮೂಲಕ ಪಲ್ಸ್ ಪೋಲಿಯೋ ರಾಷ್ಟ್ರೀಯ ಕಾರ್ಯಕ್ರಮ ಯಶಸ್ವಿಗೊಳಿಸಿ ಎಂದು ಶಾಸಕ ಟಿ.ರಘುಮೂರ್ತಿ ತಿಳಿಸಿದರು.

ಅವರು, ಭಾನುವಾರ ಸಾರ್ವಜನಿಕ ಆಸ್ಪತ್ರೆ ಸಭಾಂಗಣದಲ್ಲಿ ತಾಲ್ಲೂಕು ಆರೋಗ್ಯಾಧಿಕಾರಿಗಳು ಹಾಗೂ ಆರೋಗ್ಯ ಘಟಕ ಸಂಯುಕ್ತವಾಗಿ ಹಮ್ಮಿಕೊಂಡಿದ್ದ ರಾಷ್ಟ್ರೀಯ ಪಲ್ ಪೋಲಿಯೋ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು. ಕಳೆದ 2023–24ನೇ ವರ್ಷ ಅನಿವಾರ್ಯವಾಗಿ ಪೋಲಿಯೋ ಲಸಿಕೆ ಹಾಕಲು ಸಾಧ್ಯವಾಗಲಿಲ್ಲ. ಅದರ ಹಿಂದೆ ನಡೆದ ಎಲ್ಲಾ ಕಾರ್ಯಕ್ರಮಗಳಲ್ಲಿ ಪಲ್ ಪೋಲಿಯೋ ಈ ಭಾಗದಲ್ಲಿ ಯಶಸ್ವಿಯಾಗಿ ಮುಕ್ತಯವಾಗಿದೆ. ನಿರೀಕ್ಷೆ ಮೀರಿ ಫಲಿತಾಂಶ ದಾಖಲಿಸಿದೆ. ವೈದ್ಯರು ಮತ್ತು ಸಿಬ್ಬಂದಿ ವರ್ಗ ತಮ್ಮನ್ನು ತಾವೇ ಈ ಪುಣ್ಯ ಕಾರ್ಯಕ್ಕೆ ಸಮರ್ಪಿಸಿಕೊಳ್ಳಬೇಕು. 2024ರ ರಾಷ್ಟ್ರೀಯ ಪಲ್ಸ್ ಪೋಲಿಯೋ ಕಾರ್ಯಕ್ರಮ ಯಶಸ್ವಿಕಾಣುವ ನಿಟ್ಟಿನಲ್ಲಿ ನಾವೆಲ್ಲರೂ ಆರೋಗ್ಯ ಇಲಾಖೆಯೊಂದಿಗೆ ಕೈಜೋಡಿಸಬೇಕೆಂದರು.

ಈ ಸಂದರ್ಭದಲ್ಲಿ ಆಸ್ಪತ್ರೆ ಆಡಳಿತಾಧಿಕಾರಿ ಡಾ.ಜೆ.ಡಿ. ವೆಂಕಟೇಶ್, ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ರಾಮಪ್ಪ,ನಗರಸಭೆ ಸದಸ್ಯೆ ಸುಜಾತ, ಜೈತುಂಬಿ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಕೆ.ವೀರಭದ್ರಪ್ಪ, ಮುಖಂಡರಾದ ಪ್ರಕಾಶ್‌ಮೂರ್ತಿ, .ಚೇತನ್‌ಕುಮಾರ್, ಅಂಜಿನಪ್ಪ, ಕೃಷ್ಣಮೂರ್ತಿ, ರುದ್ರಮುನಿ, ಪ್ರಹ್ಲಾದ್, ಖಾದರ್ ಮುಂತಾದವರು ಉಪಸ್ಥಿತರಿದ್ದರು.

## ಪೋಲಿಯೋ ಲಸಿಕಾ ಕಾರ್ಯಕ್ರಮಕ್ಕೆ ಶಾಸಕ ಗೋವಿಂದಪ್ಪ ಚಾಲನೆ



» **ಹೊಸದುರ್ಗ**


ದೇಶಾದ್ಯಂತ 3 ನೇ ಮಾರ್ಚ್ ಭಾನುವಾರ 5 ವರ್ಷದೊಳಗಿನ ಎಲ್ಲಾ ಮಕ್ಕಳಿಗೂ ಪೋಲಿಯೋ ಲಸಿಕೆ ಹಾಕುವ ಕಾರ್ಯಕ್ರಮ ಹಮ್ಮಿಕೊಂಡಿದ್ದು ತಾಲ್ಲೋಕಿನ ಸಾರ್ವಜನಿಕರು5ವರ್ಷದೊಳಗಿನ ಎಲ್ಲಾ ಮಕ್ಕಳನ್ನು ಹತ್ತಿರದ ಪೋಲಿಯೋ ಬೂತ್‌ಗೆ ಕರೆ ತಂದು 2 ಹನಿ ಪೋಲಿಯೋ ಹನಿ ಹಾಕಿಸಿ ಹಾಗೂ ಪೋಲಿಯೋ ವಿರುದ್ಧ ಭಾರತ ಸಾದಿಸಿರುವ ಗೆಲುವನ್ನು ಮುಂದುವರೆಸಲು ಕೈಜೋಡಿಸಿ ಎಂದು ಆಹಾರ ಮತ್ತು ನಾಗರೀಕ ಸರಬರಾಜು ನಿಗಮದ ಅಧ್ಯಕ್ಷ ಹಾಗೂ ಶಾಸಕ ಬಿ.ಜಿ.ಗೋವಿಂದಪ್ಪ ಕರೆ ನೀಡಿದರು.ಜಿಲ್ಲಾ ಆಡಳಿತ, ಜಿಲ್ಲಾಆರೋಗ್ಯ ಮತ್ತು ಕುಟುಂಬ ಕಲ್ಯಾಣಇಲಾಖೆ, ಜಿಲ್ಲಾ ಆರ್.ಸಿ.ಹೆಚ್‌ಅಧಿಕಾರಿಗಳಕಛೇರಿ. ಚಿತ್ರದುರ್ಗ,ತಾಲ್ಲೋಕು ಆಡಳಿತ, ತಾಲ್ಲೋಕು ಆರೋಗ್ಯಧಿಕಾರಿಗಳ ಕಛೇರಿ ಹೊಸದುರ್ಗ ಹಾಗೂ ಸಮುದಾಯ ಆರೋಗ್ಯ ಕೇಂದ್ರ ಬೆಲಗೂರು ಇವರ ಸಂಯುಕ್ತಾಶ್ರಯದಲ್ಲಿ ತಾಲೂಕಿನ ಬೆಲಗೂರು ಗ್ರಾಮದಲ್ಲಿ ಭಾನುವಾರ ನಡೆದ ರಾಷ್ಟ್ರೀಯ ಪಲ್ಸ್ ಪೋಲಿಯೋ ಲಸಿಕಾ ಕಾರ್ಯಕ್ರಮವನ್ನು ಮಗುವಿಗೆ ಪೋಲಿಯೋ ಲಸಿಕೆ ಹಾಕುವ ಮೂಲಕ ಉದ್ಘಾಟಿಸಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು. ಡಾ.ರಾಘವೇಂದ್ರ ಪ್ರಸಾದ್ ಮಾತನಾಡಿ ಭಾರತವು ಪೋಲಿಯೋ ಮುಕ್ತ ದೇಶವಾಗಿದೆ. ಆದರೆ ಕೆಲವು ದೇಶಗಳಲ್ಲಿ ಪೋಲಿಯೋಇನ್ನೂ ಭೀತಿಂಯನ್ನುಂಟು ಮಾಡುತ್ತಿದ್ದು, ನಮ್ಮ ದೇಶದಲ್ಲೂ ಮರುಕಳಿಸುವ ಸಾಧ್ಯತೆಯಿದೆ. ಪ್ರಯುಕ್ತ ಪ್ರತಿ ಬಾರಿಯೂ 2 ಹನಿ ಪೋಲಿಯೋ ಲಸಿಕೆ ಹಾಕಿಸಿ ನಿಮ್ಮ ಮಗುವಿನ ಸಂಪೂರ್ಣರಕ್ಷಣೆಯನ್ನು ಖಚಿತಪಡಿಸಿಕೊಳ್ಳಿ ಎಂದರು. ತಾಲ್ಲೋಕಿನಲ್ಲಿ 0 ಯಿಂದ 5 ವರ್ಷದೊಳಗಿನ ಒಟ್ಟು 14857 ಮಕ್ಕಳಿಗೆ ಲಸಿಕೆ ಹಾಕುವ ಗುರಿಯೊಂದಿದ್ದು, ಲಸಿಕೆ ಹಾಕಲು 172 ತಂಡ. 48 ಮೇಲ್ವಿಚಾರಕರನ್ನು ರಚಿಸಲಾಗಿದೆ ಎಂದರು.

ಪುಟ 3

### ಫಾಸ್ಟ್ ನ್ಯೂಸ್

## ಇಂದಿನಿಂದ ಮಾಜಿ ಸಚಿವ ಗೂಳಿಹಟ್ಟಿ ಡಿ ಶೇಖರ್ ಒಂಟಿ ಅಮರಣ ಉಪವಾಸ ಸತ್ಯಾಗ್ರಹ

» **ಹೊಸದುರ್ಗ**



ತಾಲ್ಲೂಕಿನ ಪರಿಶಿಷ್ಟ ಜಾತಿಯ ಕೂಲಿ ಕಾರ್ಮಿಕರ ಮೇಲೆ ಪದೇ ಪದೇ ದೌರ್ಜನ್ಯ ಎಸಗಿರುವುದು ಹಾಗೂ ಡೀಮ್ಡ್ ಅರಣ್ಯ ಪ್ರದೇಶದಲ್ಲಿ ಅಕ್ರಮ ಗಣಿಗಾರಿಕೆಗೆ ಬೆಂಬಲ ನೀಡಿ ಮಂಜೂರು ಮಾಡಲು, ಶಿಫಾರಸ್ಸಿಗೆ ಅನುಕೂಲ ಮಾಡಿಕೊಟ್ಟಿರುವ ಹಿಂದಿನ ಜಿಲ್ಲಾಧಿಕಾರಿ, ಉಪವಿಭಾಗಾಧಿಕಾರಿ, ಉಪ ಅರಣ್ಯಸಂರಕ್ಷಣಾಧಿಕಾರಿ, ಜಿಲ್ಲಾ ಹಾಗೂ ವಲಯ ಅರಣ್ಯಾಧಿಕಾರಿಗಳ ವಿರುದ್ಧ ಸೂಕ್ತ ಕ್ರಮಕ್ಕೆ ಒತ್ತಾಯಿಸಿ ಮಾಜಿ ಸಚಿವ ಗೂಳಿಹಟ್ಟಿ ಡಿ ಶೇಖರ್ ಪಟ್ಟಣದ ಅರಣ್ಯ ಇಲಾಖೆ ಎದುರು ಮಾರ್ಚ್ 4 ಸೋಮವಾರದಿಂದ ಆಮರಣ ಉಪವಾಸ ಸತ್ಯಾಗ್ರಹ ಆರಂಭಿಸಲಿದ್ದಾರೆ. ಈ ಕುರಿತು ಗೂಳಿಹಟ್ಟಿ ಡಿ. ಶೇಖರ್ ಅವರು ಆಡಿಯೋವನ್ನು ತಮ್ಮ ವಾಟ್ಸಪ್ ಸ್ಟೇಟಸ್ ನಲ್ಲಿ ಹಂಚಿಕೊಂಡಿದ್ದು ತಾಲ್ಲೂಕಿನ ಗುಡ್ಡಗಾಡುಗಳಲ್ಲಿ ಬಿದ್ದಿರುವ ಕಲ್ಲುಗಳು ಮತ್ತು ಬೆಂಕಿಯಿಂದ ಸುಟ್ಟ ಸೈಜು ಕಲ್ಲು ಹಾಗೂ ಕಲ್ಲು ಒಡೆದು ವೃತ್ತಿ ಮಾಡುತ್ತಿರುವ ಪರಿಶಿಷ್ಟ ಜಾತಿಯ ಕೂಲಿ ಕಾರ್ಮಿಕರ ಮೇಲೆ ಅರಣ್ಯ ಇಲಾಖೆಯವರು ನಿರಂತರ ದೌರ್ಜನ್ಯ ಎಸಗುತ್ತಿದ್ದಾರೆ. ಕಲ್ಲು ಒಡೆಯುವವರ ಸಾಂಪ್ರಾದಾಯಿಕ ಜೀವನಕ್ಕೆ ತೊಂದರೆ ಮಾಡಬಾರದೆಂಬ ನಿಯಮವನ್ನು ಹೊಸದುರ್ಗದಲ್ಲಿ ಉಲ್ಲಂಘಿಸಲಾಗುತ್ತಿದೆ ಎಂದು ಆರೋಪಿಸಿರುವ ಅವರು ಅಕ್ರಮವಾಗಿ ಗಣಿಗಾರಿಕೆ ನಡೆಸಲು ಅವಕಾಶ ಕಲ್ಪಿಸಿರುವವರ ವಿರುದ್ಧ ಒಂಟಿ ಆಮರಣ ಉಪವಾಸ ಸತ್ಯಾಗ್ರಹ ಆರಂಭಿಸುತ್ತೇನೆ ಎಂದಿದ್ದಾರೆ.

## ಪಂಚಮಿತ್ರ ವಾಟ್ಸಪ್ ಸೇವೆ: ಸಚಿವರಿಂದ ಚಾಲನೆ

» **ದಾವಣಗೆರೆ**

ಗ್ರಾಮ ಪಂಚಾಯಿತಿ ಸೇವೆಗಳನ್ನು ಪಡೆಯಲು ಡಿಜಿಟಲೀಕರಣಕ್ಕೆ ಹೆಚ್ಚಿನ ಒತ್ತು ನೀಡಿದ್ದು ಪಂಚಮಿತ್ರ ಸೇವೆಗಳನ್ನು ವಾಟ್ಸಪ್ ಚಾಟ್‌ನಲ್ಲಿ ಪಡೆಯಲು ಗಣಿ ಮತ್ತು ಭೂ ವಿಜ್ಞಾನ, ತೋಟಗಾರಿಕೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್.ಎಸ್. ಮಲ್ಲಿಕಾರ್ಜುನ್ ಚಾಲನೆ ನೀಡಿದರು. ಅವರು ಭಾನುವಾರ ದಾವಣಗೆರೆ ತಾ; ದೊಡ್ಡಬಾತಿ ಗ್ರಾಮದಲ್ಲಿ ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯತ್, ಗ್ರಾಮ ಪಂಚಾಯಿತಿ ದೊಡ್ಡಬಾತಿ, ಹಳೆಬಾತಿಯ ಸಂಯುಕ್ತಾಶ್ರಯದಲ್ಲಿ ಏರ್ಪಡಿಸಲಾದ ಜಿಲ್ಲಾ ಮಟ್ಟದ ಜನತಾ ದರ್ಶನ ಕಾರ್ಯಕ್ರಮದಲ್ಲಿ ಪಂಚಮಿತ್ರ ವಾಟ್ಸಪ್ ಸೇವೆಗೆ ಸಚಿವರು ಚಾಲನೆ ನೀಡಿದರು. ಗ್ರಾಮೀಣ ಜನರಿಗೆ 89 ಸೇವೆಗಳನ್ನು ನೀಡುವ ಪಂಚಮಿತ್ರ ಪೋರ್ಟಲ್ ಮತ್ತು ವಾಟ್ಸಾಪ್ ಚಾಟ್ ಡಿಜಿಟಲ್ ವೇದಿಕೆಯ ಮೂಲಕ ಪಡೆಯಲು ಅವಕಾಶ ಕಲ್ಪಿಸಿದೆ. ಇದರ ಮೂಲಕ ಗ್ರಾಮ ಪಂಚಾಯಿತಿಗೆ ಸಂಬಂಧಿಸಿದ ವಿವಿಧ 17 ಸೇವೆಗಳು, ಇತರೆ ಇಲಾಖೆಗಳಿಗೆ ಸಂಬಂಧಿಸಿದ 72 ಸೇವೆಗಳು ಈ ವೇದಿಕೆಯಲ್ಲಿ ಸಿಗಲಿವೆ. ಕಟ್ಟಡ ಪರನಾನಗಿ, ಹೊಸ ನೀರು ನಲ್ಲಿ ಸಂಪರ್ಕ, ಬೀದಿ ದೀಪ ನಿರ್ವಹಣೆ, ಸ್ವಾಧೀನ ಪ್ರಮಾಣ ಪತ್ರ, ವ್ಯಾಪಾರ ಪರವಾನಗಿ, ನಿರಾಕ್ಷೇಪಣಾ ಪತ್ರ, ಜಾಬ್ ಕಾರ್ಡ್ ವಿತರಣೆ ಸೇರಿದಂತೆ ಗ್ರಾಮ ಪಂಚಾಯಿತಿ ಸೇವೆಗಳನ್ನು ಇದರಲ್ಲಿ ಪಡೆಯಬಹುದಾಗಿದೆ. ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸುರೇಶ್ ಇಟ್ನಾಳ್ ಪಂಚಮಿತ್ರ ವಾಟ್ಸಪ್ ಸೇವೆಗಳ ಬಗ್ಗೆ ವಿವರಿಸಿದರು. ಜಿಲ್ಲಾಧಿಕಾರಿ ಡಾ; ವೆಂಕಟೇಶ್ ಎಂ.ವಿ, ದೊಡ್ಡಬಾತಿ ಗ್ರಾಮ ಪಂಚಾಯತ್ ಅಧ್ಯಕ್ಷರಾದ ಮಂಜುಳಾ.ಡಿ ಇವರು ಅಧ್ಯಕ್ಷತೆ ವಹಿಸಿದ್ದರು. ಹಳೆಬಾತಿ ಗ್ರಾಮ ಪಂಚಾಯತ್ ಅಧ್ಯಕ್ಷರಾದ ಸೀತಾ ಆರ್, ದೊಡ್ಡಬಾತಿ ಗ್ರಾಮ ಪಂಚಾಯತ್ ಉಪಾಧ್ಯಕ್ಷರಾದ ಭಾನುವಳ್ಳಿ ಸಿದ್ದಪ್ಪ, ಹಳೇಬಾತಿ ಇನ್ನಿತರರು ಉಪಸ್ಥಿತರಿದ್ದರು.

# ಸಿಲಿಂಡರ್ ಸ್ಫೋಟ ಗುಡಿಸಲುಗಳು ಸುಟ್ಟು ಭಸ್ಮ

» **ಹೊಸದುರ್ಗ**

ತಾಲೂಕಿನ ಮತ್ತೋಡು ಹೋಬಳಿಯ ಕಂಚೀಪುರ ಗ್ರಾಮದ ಗುಡಿಸಲೊಂದರಲ್ಲಿ ಶನಿವಾರ ಸಂಜೆ ಸಿಲಿಂಡರ್ ಸ್ಫೋಟಗೊಂಡ ಪರಿಣಾಮ ರಾಮಕೃಷ್ಣ ಮತ್ತು ಓಬಳೇಶ್ ಎಂಬುವವರಿಗೆ ಸೇರಿದ್ದ 2 ಗುಡಿಸಲುಗಳು ಬೆಂಕಿಯಲ್ಲಿ ಹೊತ್ತಿ ಉರಿದು ಸುಟ್ಟು ಭಸ್ಮವಾಗಿದ್ದು, ಅದೃಷ್ಟವಶಾತ್ ಮನೆಯ ನಿವಾಸಿಗಳು ಅಗ್ನಿ ಅವಘಡದಿಂದ ಪಾರಾಗಿದ್ದಾರೆ.

ಗುಡಿಸಲಿಗೆ ಬೆಂಕಿ ಬಿದ್ದ ಮಾಹಿತಿ ತಿಳಿದ ತಕ್ಷಣವೇ ಘಟನಾ ಸ್ಥಳಕ್ಕೆ ಬಂದ ಅಗ್ನಿ ಶಾಮಕ ದಳದ ಸಿಬ್ಬಂದಿಗಳು ಬೆಂಕಿ ನಂದಿಸಿ, ಆಗಬೇಕಿದ್ದ ದೊಡ್ಡ ಅನಾವುತ ತಪ್ಪಿಸಿದ್ದಾರೆ. ಈ ಅಗ್ನಿ ಅವಘಡದಿಂದ ಕುರಿಗಳನ್ನು ಮಾರಿಕೊಂಡು ಬಂದು ಗುಡಿಸಲಲ್ಲಿ ಇಡಲಾಗಿದ್ದ 45.ಸಾವಿರ ರೂ,ನಗದು ಹಣ, ದವಸ ಧಾನ್ಯಗಳು ಹಾಗೂ ದಿನ ನಿತ್ಯ ಬಳಕೆಯ ವಸ್ತುಗಳು ಬೆಂಕಿಯಲ್ಲಿ ಸುಟ್ಟು ಉರಿದು ಭಸ್ಮವಾಗಿದ್ದು ಈ ಬಗ್ಗೆ ಶ್ರೀರಾಂಪುರ ಪೋಲಿಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ,



## ದೊಡ್ಡೇರಿ: ಅತ್ಯಾಚಾರ ಆರೋಪಿ ನ್ಯಾಯಾಂಗ ಬಂಧನ

» **ಚಳ್ಳಕೆರೆ**



ತಾಲ್ಲೂಕಿನ ದೊಡ್ಡೇರಿ ಗ್ರಾಮದ ತಿಪ್ಪೇಶ(21) ಎಂಬ ವ್ಯಕ್ತಿಅದೇ ಗ್ರಾಮದ ಯುವತಿಯೊಂದಿಗೆ ಮದುವೆಯಾಗುವ ಆಮಿಷವೊಡ್ಡಿ ನಿರಂತರ ಅತ್ಯಾಚಾರ ವೆಸಗುತ್ತಿದ್ದ ಹಿನ್ನೆಲೆಯಲ್ಲಿ ಈತನ ವಿರುದ್ಧ ದೂರು ನೀಡಲಾಗಿತ್ತು. ದೂರುನ್ನು ದಾಖಲಿಸಿಕೊಂಡ ಪಿಎಸ್‌ಐ ಕೆ.ಸತೀಶ್‌ನಾಯ್ಕ ಮತ್ತು ಸಿಬ್ಬಂದಿ ವರ್ಗ ಆರೋಪಿ ತಿಪ್ಪೇಶನನ್ನು ಬಂಧಿಸಿ ನ್ಯಾಯಾಲಕ್ಕೆ ಹಾಜರು ಪಡಿಸಿರುತ್ತಾರೆ.

### ಪ್ರಮುಖ ಸುದ್ದಿ

# ಭದ್ರಾ: ಹಠ ಬಿಟ್ಟು ಕೆಲಸ ಮಾಡಲು ಅನುವು ಮಾಡಿಕೊಡಲು ಅಬ್ಬಿನಹೊಳಲು ರೈತರಿಗೆ ಡಿಸಿಎಂ ಡಿ.ಕೆ.ಶಿವಕುಮಾರ್ ಮನವಿ

» **ಚಿತ್ರದುರ್ಗ**

ಲಕ್ಷಾಂತರ ರೈತರ ಆಶಾ ಕಿರಣವಾಗಿರುವ ಭದ್ರಾ ಮೇಲ್ದಂಡೆ ಯೋಜನೆಯಡಿ ಕೆಲವೇ ಕೆಲವು ರೈತರಿಂದಾಗಿ ಇಡೀ ಯೋಜನೆ ನನೆಗುದಿಗೆ ಬಿದ್ದಿದೆ. ರೈತರಿಗಾಗಿಯೇ ಇರುವ ಈ ಯೋಜನೆಯನ್ನು ಜಾರಿಗೊಳಿಸುವ ನಿಟ್ಟಿನಲ್ಲಿ ರೈತರು ಹಠ ಬಿಟ್ಟು ಕೆಲಸ ಮಾಡಲು ಅನುವು ಮಾಡಿ ಕೊಡಬೇಕು. ಪರಿಹಾರ ಕುರಿತಂತೆ ರೈತರಿಗೆ ನ್ಯಾಯ ಒದಗಿಸಲಾಗುವುದು ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಭರವಸೆ ನೀಡಿದರು.

ಚಿಕ್ಕಮಗಳೂರು ಜಿಲ್ಲೆ ತರೀಕೆರೆ ತಾಲ್ಲೂಕು ಅಬ್ಬಿನಹೊಳಲು ಗ್ರಾಮದ ಬಳಿ ಭದ್ರಾ ಮೇಲ್ದಂಡೆ ಯೋಜನೆ ಕಾಮಗಾರಿ ಸ್ಥಳಕ್ಕೆ ಭಾನುವಾರ ಭೇಟಿ ನೀಡಿ, ಬಳಿಕ ಇಲ್ಲಿನ ರೈತರೊಂದಿಗೆ ಸಮಾಲೋಚನೆ ನಡೆಸಿದರು.ರೈತರು ಮಾತನಾಡಿ,






ಪರಿಹಾರ ವಿಚಾರದಲ್ಲಿ ಅಬ್ಬಿನಹೊಳಲು, ನರಸೀಪುರ ಮತ್ತಿತರ ಗ್ರಾಮದ ರೈತರಿಗೆ ಅನ್ಯಾಯವಾಗಿದೆ, ಕೆಲ ರೈತರಿಗೆ 40 ಲಕ್ಷ ಪರಿಹಾರ ನೀಡಿದರೆ, ನಮಗೆ ಮಾತ್ರ ಕೇವಲ 4 ಲಕ್ಷ ನೀಡಿದ್ದಾರೆ, ಒದು ತೀರಾ ತಾರತಮ್ಯ ಮತ್ತು ಅನ್ಯಾಯ . ನಮಗೆ ಏಕರೂಪವಾಗಿ ಕನಿಷ್ಠ 40 ಲಕ್ಷ ಪರಿಹಾರ ನೀಡುವಂತೆ ಮನವಿ ಮಾಡಿದರು.ವಿ.ಜೆ.ಎನ್.ಎಲ್. ವ್ಯವಸ್ಥಾಪಕ ನಿರ್ದೇಶಕ ಸಣ್ಣ ಚಿತ್ತಯ್ಯ ಮಾತನಾಡಿ, ಅಬ್ಬಿನಹೊಳಲು ಬಳಿಯ 33 ರೈತರ ಪೈಕಿ 23 ರೈತರು ಪರಿಹಾರ ಮೊತ್ತ ಹೆಚ್ಚಳ ಕೋರಿ ನ್ಯಾಯಾಲಯದ ಮೊರೆ ಹೋಗಿದ್ದಾರೆ. ರೈತರಿಗೆ ಅವಾರ್ಡ್ ಮೊತ್ತವನ್ನು ನ್ಯಾಯಾಲಯಕ್ಕೆ ಜಮಾ ಮಾಡಲಾಗಿದೆ. ಇಲ್ಲಿನ 1.7 km ಕಾಮಗಾರಿ ಪೂರ್ಣಗೊಳಿಸಲು ಅನುವು ಮಾಡಿಕೊಟ್ಟರೆ ತ್ವರಿತವಾಗಿ ಪೂರ್ಣಗೊಳಿಸಿ ಅಕ್ಟೋಬರ್ ವೇಳೆಗೆ ಪ್ರಾಯೋಗಿಕ ವಾಗಿ ನೀರು ಹರಿಸುವ ಪರೀಕ್ಷೆ ನಡೆಸಲಾಗುವುದು ಎಂದರು.

ಪುಟ 2

## ಫಾಸ್ಟ್ ನ್ಯೂಸ್

### ಶಿಕ್ಷಣ ಜೊತೆ ಮಾನವೀಯ, ನೈತಿಕ ಮೌಲ್ಯಗಳು ಅತ್ಯಾವಶಕ: ಕೆ. ಎಂ ಸುರೇಶ್




» ದಾವಣಗೆರೆ

ಯಾವುದೇ ಕೆಲಸವನ್ನು ಮಾಡಿದರೂ ಶ್ರದ್ದೆ ಇರಬೇಕು. ಹಾಗ ಮಾತ್ರ ಯಶಸ್ಸು ಸಿಗುತ್ತದೆ ಎಂದು ವಿದ್ಯಾಲಯ ಗೌರವ ಕಾರ್ಯದರ್ಶಿಗಳಾದ ಕೆ. ಎಂ ಸುರೇಶ್ ತಿಳಿಸಿದರು. ಗೋಣಿವಾಡ ಬಳಿ ಶ್ರೀ ಸೋಮೇಶ್ವರ ವಸತಿ ಶಾಲೆ ನಡೆದ ಶಾರದ ಪೂಜೆ ಹಾಗೂ ಬಹುಮಾನ ವಿತರಣೆ ಕಾರ್ಯಕ್ರಮದಲ್ಲಿ ಈ ವಿಷಯ ತಿಳಿಸಿದರು. ಶ್ರದ್ದೆ ಮತ್ತು ಭಕ್ತಿ ಯಶಸ್ಸಿನ ಕೀಲಿ ಕೈಗಳಿದ್ದಂತೆ ಮಾಡುವ ಕೆಲಸ ನಮಗೆ ತೃಪ್ತಿ ತರಬೇಕು ಎಂದರು. ವಿದ್ಯಾರ್ಥಿಗಳ ಜೀವನ ಮತ್ತೆ ಸಿಗುವುದಿಲ್ಲ ಹೀಗಾಗಿ ತಾವೆಲ್ಲರೂ ಚನ್ನಾಗಿ ಓದಿ ಉತ್ತಮ ಅಂಕ ಪಡೆದು ಶಾಲೆಗೆ ಹಾಗೂ ತಂದೆ ತಾಯಿಗಳಿಗೆ ಉತ್ತಮ ಹೆಸರು ತರಬೇಕೆಂದು ತಿಳಿಸಿದರು. ಇದೇವೇಳೆ ಸಾಂಸ್ಕೃತಿಕ ಮತ್ತು ಕ್ರೀಡಾ ಚಟುವಟಿಕೆಗಳಲ್ಲಿ ಪಾಲ್ಗೊಂಡು ವಿಜೇತರಾದ ಮಕ್ಕಳಿಗೆ ಬಹುಮಾನ ನೀಡಿ ಅಭಿನಂದಿಸಲಾಯಿತು.ಬಹುಮಾನ ಪುರಸ್ಕಾರ ನೀಡಿದ ಶಾಲೆಯ ಹಿತೈಷಿಗಳಾದ ಪರಮೇಶ್ವರಪ್ಪ ರವರು ಮಕ್ಕಳಲ್ಲಿ ಸ್ಪರ್ಧಾತ್ಮಕ ಮನೋಭಾವ ಬೆಳೆದಾಗ ಮಾತ್ರ ಉನ್ನತಸ್ಥಾನವನ್ನು ಪಡೆಯಲು ಸಾಧ್ಯ ಎಂದು ಹೇಳಿದರು.ಈ ಸಂದರ್ಭದಲ್ಲಿ ಪ್ರಾಂಶುಪಾಲರಾದ ವೀಣಾ, ಒಲಂಪಿಯಾಡ್ ಸ್ಕೂಲ್ ಶಿಕ್ಷಕರು ಮತ್ತು ವಿದ್ಯಾರ್ಥಿಗಳು ಹಾಗೂ ನಮ್ಮ ಶಾಲೆಯ ಮಕ್ಕಳು, ಶಿಕ್ಷಕವೃಂದ,ಆಡಳಿತ ಸಿಬ್ಬಂದಿ ಉಪಸ್ಥಿತರಿದ್ದರು.

### ಹಠ ಬಿಟ್ಟು ಕೆಲಸ ಮಾಡಲು ಅನುವು ಮಾಡಿಕೊಡಲು ರೈತರಿಗೆ ಡಿಸಿಎಂ ಮನವಿ

» ಮೊದಲ ಪುಟದಿಂದ

ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಮಾತನಾಡಿ 21 ಸಾವಿರ ಕೋಟಿ ಮೊತ್ತದ ಬೃಹತ್ ಯೋಜನೆ ಹಾಗೂ ಲಕ್ಷಾಂತರ ರೈತರ ಆಶಾಕಿರಣವಾದ ಈ ಭದ್ರಾ ಮೇಲ್ದಂಡೆ ಯೋಜನೆಯು ಕೆಲವೇ ಕೆಲವು ರೈತರಿಂದ ನೆನೆಗುದಿಗೆ ಬೀಳುವಿದು ಸರಿಯಲ್ಲ. ರೈತರಿಗೆ ಆಗಿರುವ ತಾರತಮ್ಯದ ಬಗ್ಗೆ ನನ್ನ ಗಮನಕ್ಕೆ ಬಂದಿದೆ. ಕಾನೂನು ಚೌಕಟ್ಟಿನಲ್ಲಿ ರೈತರ ಸಮಸ್ಯೆ ಪರಿಹರಿಸಲಾಗುದು. ಕಾಲ ಕಳೆದಂತೆ ಯೋಜನಾ ವೆಚ್ಚ ಹೆಚ್ಚಾಗುತ್ತದೆ. ಹೀಗಾಗಿ ಶೀಘ್ರ ಇತ್ಯರ್ಥ ಮಾಡುವುದು ಸೂಕ್ತ. ಚುನಾವಣೆ ಘೋಷಣೆಗೂ ಮುನ್ನವೇ ಬೆಂಗಳೂರಿನಲ್ಲಿ ಸಂಬಂಧಿಸಿದ ಎಲ್ಲ ಶಾಸಕರು, ರೈತರು, ವಿಜೆಎನ್ ಎಲ್ ಅಧಿಕಾರಿಗಳು ಕಂದಾಯ ಇಲಾಖೆ ಅಧಿಕಾರಿಗಳೊಂದೊಗೆ ಸಭೆ ನಡೆಸಿ ಒಂದು ಒಳ್ಳೆಯ ನಿರ್ಧಾರ ಮಾಡೋಣ. ಹೀಗಾಗಿ ರೈತರು ಹಠ ಬಿಟ್ಟು ಕೂಡಲೆ ಕಾಮಗಾರಿ ನಡೆಸಲು ಅನುವು ಮಾಡಿಕೊಡಬೇಕು ಎಂದು ಮನವಿ ಮಾಡಿದರು. ನಾಳೆಯಿಂದಲೇ ಕಾಮಗಾರಿ ಪ್ರಾರಂಭಿಸಲು ಅಧಿಕಾರಿಗಳಿಗೆ ತಿಳಿಸಿದ್ದೇನೆ. ರೈತರು ದಯವಿಟ್ಟು ಸಹಕಾರ ನೀಡುವಂತೆ ಮನವಿ ಮಾಡಿದರು. ಯೋಜನೆ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ. ಸುಧಾಕರ್, ಶಾಸಕರುಗಳಾದ ರಘುಮೂರ್ತಿ, ಬಿ..ಜಿ. ಗೋವಿಂದಪ್ಪ, ಎನ್.ವೈ. ಗೋಪಾಲಕೃಷ್ಣ, ಚಂದ್ರಪ್ಪ, ವೀರೇಂದ್ರ ಪಪ್ಪಿ, ಶಿರಾ ಶಾಸಕ ಟಿ.ಬಿ. ಜಯಚಂದ್ರ, ತರೀಕೆರೆ ಶಾಸಕ ಶ್ರೀನಿವಾಸ್, ಚಿಕ್ಕನಾಯಕನಹಳ್ಳಿ ಶಾಸಕ ಸುರೇಶ್, ಕಡೂರು ಶಾಸಕ ಆನಂದ್,ಚಿಕ್ಕಮಗಳೂರು ಶಾಸಕ ತಮ್ಮಯ್ಯ, ಶೃಂಗೇರಿ ಶಾಸಕ ರಾಜೇಗೌಡ, ಭದ್ರಾ ಮೇಲ್ದಂಡೆ ಯೋಜನೆ ಮುಖ್ಯ ಅಭಿಯಂತರ ಶಿವಪ್ರಕಾಶ್, ಜಿಲ್ಲಾಧಿಕಾರಿ ಟಿ. ವೆಂಕಟೇಶ್ , ಮಾಜಿ ಸಂಸದ ಬಿ.ಎಂ.ಚಂದ್ರಪ್ಪ ಮುಂತಾದ ಗಣ್ಯರು, ಅಧಿಕಾರಿಗಳು ಇದ್ದರು

### ಪಲ್ಸ್ ಪೋಲಿಯೋ ಲಸಿಕೆ ಮಕ್ಕಳಿಗೆ ತಪ್ಪದೇ ಹಾಕಿಸಿ: ಕೆ.ಸಿ.ವೀರೇಂದ್ರ ಪಪ್ಪಿ

» ಮೊದಲ ಪುಟದಿಂದ

ಆದ್ದರೂ ಕೂಡ ಅಕ್ಕಪಕ್ಕದ ಅನೇಕ ದೇಶಗಳಲ್ಲಿ ಈಗಲೂ ಕೂಡ ಪೋಲಿಯೊ ಪ್ರಖರಣಗಳು ಚಾಲ್ತಿಯಲ್ಲಿರುವ ಕಾರಣ ನಮ್ಮ ದೇಶದಲ್ಲಿ ಪೋಲಿಯೊ ಲಸಿಕಾ ಕಾರ್ಯಕ್ರಮಕ್ಕೆ ಚಾಲನೆ ಕೊಡಲಾಗಿದೆ. ಪ್ರಸ್ತುತ ಜಿಲ್ಲೆಯಲ್ಲಿ 135105 ಮಕ್ಕಳಿಗೆ ಪೋಲಿಯೊ ಲಸಿಕೆ ಮೀಡುವ ಗುರಿ ಹೊಂದಲಾಗಿದ್ದು ಒಟ್ಟು 1084 ಬೂತ್ ಗಳನ್ನ ನಿರ್ಮಾಣ ಮಾಡಿದ್ದು ಮಾರ್ಚ್ 4 ರಿಂದ 6 ರ ವರೆಗೆ ಮನೆ ಮನೆ ಬೇಟಿ ನೀಡಿ ಪೋಲಿಯೊ ಲಸಿಕೆ ಹಾಕಲಾಗುತ್ತಿದ್ದು ಸಾರ್ವಜನಿಕರು ಇದಕ್ಕೆ ಸಹಕಾರ ಕೊಟ್ಟು ಪೋಲಿಯೊ ಮುಕ್ತ ರಾಷ್ಟ ನಿರ್ಮಾಣ ಮಾಡಲು ಸಹಕರಿಸಬೇಕು ಎಂದು ಸಲಹೆಯನ್ನ ನೀಡಿದ್ದಾರೆ. ಇನ್ನೂ ಇದೇ ಸಂದರ್ಭದಲ್ಲಿ ಸ್ವಾಸ್ಥ್ಯ ಫೌಂಡೇಷನ್ ನ ಸಂಸ್ಥಾಪಕರಾದ ಡಾ ಡಾ ತೋಯಿಜಾಕ್ಷಿ ಬಾಯಿ ಅವರಿಂದ ಆಶಾ ಕಾರ್ಯಕರ್ತೆಯರಿಗೆ ಬಿಸಿಲಿನ ತಾಪದಿಂದ ತಪ್ಪಿಸಿಕೊಳ್ಳುವ ಸಲುವಾಗಿ ಬಿಳಿ ಛತ್ರಿಗಳನ್ನ ಉಚಿತವಾಗಿ ವಿತರಣೆ ಸಹ ಮಾಡಲಾಯಿತು.

## ಜಿಲ್ಲೆಯಿಂದ 350 ಜನ ಸಮಾವೇಶದಲ್ಲಿ ಭಾಗಿ – ಅಧ್ಯಕ್ಷ ಮಂಜುನಾಥ್ ಮಾಹಿತಿ

# ಇಂದಿನಿಂದ ರಾಜ್ಯ ಗುತ್ತಿಗೆದಾರರ ಸಂಘ ಸಮ್ಮೇಳನ

» ಚಿತ್ರದುರ್ಗ



ಕರ್ನಾಟಕ ರಾಜ್ಯ ಗುತ್ತಿಗೆದಾರರ ಸಂಘದ ಸಮ್ಮೇಳನವು ಮಾ.4 ಮತ್ತು 5 ರಂದು ಬೆಂಗಳೂರಿನಲ್ಲಿ ನಡೆಯಲಿದ್ದು ಇದರಲ್ಲಿ ಗುತ್ತಿಗೆದಾರರ ಸಮಸ್ಯೆಗಳ ಬಗ್ಗೆ ಚರ್ಚೆ ನಡೆಯಲಿದೆ ಎಂದು ಚಿತ್ರದುರ್ಗ ಜಿಲ್ಲಾ ಗುತ್ತಿಗೆದಾರರ ಸಂಘದ ಅಧ್ಯಕ್ಷ ಮಂಜುನಾಥ್ ತಿಳಿಸಿದರು.

ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಈ ಸಮ್ಮೇಳನವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಉದ್ಘಾಟನೆ ಮಾಡಲಿದ್ದು, ಸಚಿವ ಸಂಪುಟದ ಸದಸ್ಯರುಗಳು ಭಾಗವಹಿಸಲಿದ್ದಾರೆ ಎಂದರು.

1948 ರಿಂದ ಪ್ರಾರಂಭವಾದ ಈ ಸಂಘವನ್ನು ಹಲವಾರು ಅಧ್ಯಕ್ಷರು ಮುನ್ನಡೆಸುತ್ತಾ ಬಂದಿದ್ದಾರೆ, ಈಗ ಕೆಂಪಯ್ಯನವರು ಅಧ್ಯಕ್ಷರಾಗಿದ್ದು, ಗುತ್ತಿಗೆದಾರರ ಸಮಸ್ಯೆಗಳಿಗೆ ಸ್ಪಂದಿಸುತ್ತಿದ್ದಾರೆ. ಈ ಸಮಾವೇಶದಲ್ಲಿ ಗುತ್ತಿಗೆದಾರರ ಸಮಸ್ಯೆಗಳಾದ ಜಿ.ಎಸ್.ಟಿ.ಸರ್ಕಾರದಿಂದ ಹಣ ಬಿಡುಗಡೆ, ಪ್ಯಾಕೇಜ್ ಗುತ್ತಿಗೆಯ ಬಗ್ಗೆ ಚರ್ಚೆ ನಡೆಯಲಿದೆ, ಇಲ್ಲಿ ಜಿಎಸ್.ಟಿ.ಯಿಂದ ಗುತ್ತಿಗೆದಾರರ ವಿವಿಧ ರೀತಿಯ ಸಮಸ್ಯೆ ಉಂಟಾಗಿದೆ, ಇದೇ ರೀತಿ ನಾವು ಮಾಡಿದ ಕೆಲಸಕ್ಕೆ ಸರ್ಕಾರ ಇದುವರೆವಿಗೂ ಹಣವನ್ನು ಬಿಡುಗಡೆ ಮಾಡಿಲ್ಲ ಅಲ್ಲದೆ ಪ್ಯಾಕೇಜ್ ಗುತ್ತಿಗೆ ನೀಡುವಲ್ಲಿ ಅಧಿಕಾರಿಗಲು ಶಾಮಿಲಾಗಿ ತಮಗೆ ಬೇಕಾದವರಿಗೆ ನೀಡುತ್ತಿದ್ದಾರೆ ಇದರಿಂದ ನಮ್ಮ ಗುತ್ತಿಗೆದಾರರಿಗೆ ಅನ್ಯಾಯವಾಗುತ್ತಿದೆ ಎಂದು ದೂರಿದ್ದು ಇದರ ಬಗ್ಗೆ ಸಮಾವೇಶದಲ್ಲಿ ಮುಖ್ಯಮಂತ್ರಿಗಳ ಗಮನಕ್ಕೆ ತರಲಾಗುವುದು ಎಂದು ತಿಳಿಸಿದರು.

ಜಿಲ್ಲೆಯಲ್ಲಿ ವಿವಿಧ ಇಲಾಖೆ ಹಾಗೂ ನಗರಸಭೆಯಿಂದ ಸುಮಾರು 380 ಜನ ಗುತ್ತಿಗೆದಾರರಿದ್ದು ಇದರಲ್ಲಿ 350ಜನ ಸಮಾವೇಶದಲ್ಲಿ ಭಾಗವಹಿಸಲಿದ್ದಾರೆ. ಸಂಘದಿಂದ ಸಮ್ಮೇಳನಕ್ಕೆ ಹೋಗಿ ಬರಲು ವಾಹನದ ವ್ಯವಸ್ಥೆಯನ್ನು ಮಾಡಲಾಗಿದೆ. ಸಂಘದ ಸದಸ್ಯರು ಸಮಾವೇಶದ ಸ್ಥಳದಲ್ಲಿಯೇ ಹೆಸರನ್ನು ನೊಂದಾಯಿಸಬಹುದಾಗಿದೆ. ಸಮ್ಮೇಳನಕ್ಕೆ ಬರುವವರಿಗೆ ಊಟ ಮತ್ತು ವಸತಿ ವ್ಯವಸ್ಥೆಯನ್ನು ಮಾಡಲಾಗಿದೆ ಎಂದ ಅವರು, ನಮಗೆ ಈ ಸಮಾವೇಶದಲ್ಲಿ ಜಿ.ಎಸ್.ಟಿ. ಬಗ್ಗೆ ಇರುವ ಸಮಸ್ಯೆ ಪರಿಹಾರವಾಗಬೇಕಿದೆ ಸರ್ಕಾರ ನಾವು ಮಾಡಿದ ಕೆಲಸಕ್ಕೆ ಶೀಘ್ರವಾಗಿ ಹಣವನ್ನು ಬಿಡುಗಡೆ ಮಾಡಬೇಕಿದೆ ಹಾಗೂ ಪ್ಯಾಕೇಜ್ ಗುತ್ತಿಗೆಯನ್ನು ನಮ್ಮ ಸಂಘದವರಿಗೆ ನೀಡುವಮತಾಗಬೇಕಿದೆ ಈ ಸಮಸ್ಯೆಗಳು ಪರಿಹಾರವನ್ನು ಕಂಡುಕೊಳ್ಳಬೇಕಿದೆ ಎಂದರು.

ಹಿಂದಿನ ಸರ್ಕಾರದಲ್ಲಿ ಭ್ರಷ್ಠಾಚಾರ ಹೆಚ್ಚಾಗಿ ಇತ್ತು ಈಗಿನ ಸರ್ಕಾರದಲ್ಲಿಯೂ ಸಹಾ ಭ್ರಷ್ಠಾಚಾರ ಇದೆ ಆದರೆ ಇಲ್ಲಿ ನೇರವಾಗಿ ಮಂತ್ರಿಗಳು ಭಾಗಿಯಾಗದೇ ಆಧಿಕಾರಿಗಳ ಮೂಲಕ ಪಡೆಯುತ್ತಿದ್ದಾರೆ. ಇದು ತಪ್ಪಬೇಕಿದೆ. ಪರಿಶಿಷ್ಟ ಜಾತಿ ಮತ್ತು ಪಂಗಡದವರಿಗಾಗಿ ಇರುವ ವಿವಿಧ ರೀತಿಯ ಟೆಂಡರ್ ಗಳನ್ನು ಅವರೇ ಮಾಡಬೇಕು ಟೆಂಡರ್‌ನ್ನು ಅವರು ಪಡೆದು ಬೇರೆಯವರಿಗೆ ಕಾಮಗಾರಿಯನ್ನು ನೀಡಿದರೆ ಅಂತಹರ ವಿರುದ್ದ ಕ್ರಮ ತೆಗೆದುಕೊಳ್ಳಲಾಗುವುದು. ಚಿತ್ರದುರ್ಗ ರಸ್ತೆ ಕಾಮಗಾರಿಯಲ್ಲಿ ಅಂದಿನ ದಿನವೇ ನಾವು ರಸ್ತೆ ಮಧ್ಯದಲ್ಲಿ ಡಿವೈಂಡರ್ ಬೇಡ ಎಂದು ತಿಳಿಸಿದ್ದೇವೆ ಇದರ ಬಗ್ಗೆ ಪತ್ರವನ್ನು ಸಹಾ ಬರೆಯಲಾಗಿತ್ತು ಆದರೆ ಅಧಿಕಾರಿಗಳ ಯಾರ ಮಾತನ್ನು ಕೇಳದೇ ರಸ್ತೆ ಮಧ್ಯದಲ್ಲಿ ಅವೈಜ್ಞಾನಿಕವಾಗಿ ಡಿವೈಂಡರ್‌ಗಳನ್ನು ನಿರ್ಮಾಣ ಮಾಡಿದ್ದಾರೆ ಈಗ ಅದನ್ನು ಒಡೆಯುತ್ತಿದ್ದಾರೆ. ಇದು ಅಧಿಕಾರಿಗಳಿಂದ ಆದ ತಪ್ಪಾಗಿದೆ ಎಂದು ಹೇಳಿದರು.

ಗೋಷ್ಠಿಯಲ್ಲಿ ತಾಲ್ಲೂಕು ಅಧ್ಯಕ್ಷರಾದ ಮಲ್ಲೇಶಪ್ಪ, ರಾಜ್ಯ ನಿರ್ದೇಶಕರಾದ ಕುಮಾರ್, ಹೇಮಂತ್,ಡಿ.ಸಿ.ವೆಂಕಟೇಶ್, ಪ್ರಧಾನ ಕಾರ್ಯದರ್ಶಿ ಅಜೇಯ್ ಸೇರಿದಂತೆ ಇತರರು ಭಾಗವಹಿಸಿದ್ದರು.

# ಎಸ್ ಎಸ್ ಎಲ್ ಸಿಯಲ್ಲಿ ರಾಜ್ಯಮಟ್ಟದಲ್ಲಿ ಪ್ರಥಮ ಸ್ಥಾನ ಪಡೆಯಲು ಪ್ರಯತ್ನಿಸಿ



» ಚಳ್ಳಕೆರೆ

ಶೈಕ್ಷಣಿಕ ಕ್ಷೇತ್ರದಲ್ಲಿ ತಾಲ್ಲೂಕು ತನ್ನದೇಯಾದ ವೈಶಿಷ್ಟತೆ ಹೊಂದಿದೆ. ಕಳೆದ ಬಾರಿಯ ಎಸ್‌ಎಸ್‌ಎಲ್‌ಸಿ ಪರೀಕ್ಷೆ ಫಲಿತಾಂಶದಲ್ಲಿ ರಾಜ್ಯಕ್ಕೆ ಎರಡನೇ ಸ್ಥಾನ ಒದಗಿಸುವಲ್ಲಿ ಚಳ್ಳಕೆರೆ ತಾಲ್ಲೂಕುಸಫಲವಾಗಿದೆ. ಈ ಬಾರಿ ಎಲ್ಲರ ದೃಢಸಂಕಲ್ಪದಿಂದ ಎಸ್‌ಎಸ್‌ಎಲ್‌ಸಿ ಫಲಿತಾಂಶದಲ್ಲಿ ರಾಜ್ಯಮಟ್ಟದಲ್ಲಿ ಪ್ರಥಮಸ್ಥಾನ ಗಳಿಸುವ ಸಂಕಲ್ಪ ಮಾಡಿ ಎಂದು ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ಮಂಡಳಿ ಅಧ್ಯಕ್ಷ, ಶಾಸಕ ಟಿ.ರಘುಮೂರ್ತಿ ತಿಳಿಸಿದರು.

ಅವರು, ಶನಿವಾರ ತಾಲ್ಲೂಕು ಪಂಚಾಯಿತಿ ಕಾರ್ಯಾಲಯದಲ್ಲಿ ಶಿಕ್ಷಣ ಇಲಾಖೆ ಹಮ್ಮಿಕೊಂಡಿದ್ದ ತಾಲ್ಲೂಕು ಮಟ್ಟದ ಪ್ರೌಢಶಾಲಾ ಶಿಕ್ಷಕರ ತರಬೇತಿ ಕಾರ್ಯಗಾರವನ್ನು ಉದ್ಘಾಟಿಸಿ ಮಾತನಾಡಿದರು. ಪ್ರತಿಯೊಬ್ಬ ವಿದ್ಯಾರ್ಥಿಯ ಭವಿಷ್ಯದ ಕನಸು ನನಸಾಗಲು ಎಸ್‌ಎಸ್‌ಎಲ್‌ಸಿ ಪರೀಕ್ಷೆ ಪ್ರಮುಖ ಹಂತವಾಗಿದೆ. ವಿದ್ಯಾರ್ಥಿಗಳ ಭವಿಷ್ಯವನ್ನು ಸುಭದ್ರಗೊಳಿಸುವ ಏಕೈಕ ಶಕ್ತಿ ಶಿಕ್ಷಕರಿಗೆ ಮಾತ್ರ ಇದೆ. ಪರೀಕ್ಷೆ ಆರಂಭವಾಗಲು ಕೇವಲ 23 ದಿನಗಳಿದ್ದು, ಈ ಅವಧಿಯಲ್ಲಿ ಮುಖ್ಯ ಶಿಕ್ಷಕರು ಶಾಲೆಯ ಸಹ ಶಿಕ್ಷಕರು ಎಲ್ಲರೂ ಜೊತೆಗೂಡಿ ಶೈಕ್ಷಣಿಕ ಪರಂಪರೆಯನ್ನು ಕಾಪಾಡಲು ಸಂಘಟಿತರಾಗಿ ಕಾರ್ಯನಿರ್ವಹಿಸಿ. ನಿಮ್ಮಲ್ಲಿರುವ ಎಲ್ಲಾ ಒಳ್ಳೆಯ ಅಂಶಗಳನ್ನು ವಿದ್ಯಾರ್ಥಿಗಳ ಬೆಳವಣಿಗೆಗೆ ಸದುಪಯೋಗ ಪಡಿಸಿಕೊಳ್ಳಬೇಕು. ಶಾಸಕರ ಅನುದಾನ ಡಿಎಂಎಫ್ ನಿಧಿಯಲ್ಲಿ ಸುಮಾರು 30 ಕೋಟಿ ಹಣವನ್ನು ಶಿಕ್ಷಣ ಇಲಾಖೆಗೆ ನೀಡಿರುವುದಾಗಿ ತಿಳಿಸಿದ ಶಾಸಕರು ನಾನು ಒಬ್ಬ ಪಾಲಕನಾಗಿ ಶಿಕ್ಷಕರಲ್ಲಿ ಉತ್ತಮ ಫಲಿತಾಂಶ ತರಲು ಶ್ರಮಿಸುವಂತೆ ಮನವಿ ಮಾಡುತ್ತೇನೆ ಎಂದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಕ್ಷೇತ್ರ ಶಿಕ್ಷಣಾಧಿಕಾರಿ ಕೆ.ಎಸ್.ಸುರೇಶ್, ಪ್ರಸ್ತುತ ವರ್ಷದ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ 5387 ವಿದ್ಯಾರ್ಥಿಗಳು ಆರ್ಹತೆ ಪಡೆದ್ದು, 100 ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷೆ ನಡೆಯಲಿವೆ. ಉತ್ತಮ ಫಲಿತಾಂಶ ದಾಖಲಿಸಲು ಇಡೀ ಶಿಕ್ಷಣ ಇಲಾಖೆ ಮುಖ್ಯೋಪಾಧ್ಯಾಯರು ಮತ್ತು ಶಿಕ್ಷಕರ ಸಹಕಾರದಿಂದ ಹಲವಾರು ಕಾರ್ಯಗಳ ಮೂಲಕ ಗುಣಮಟ್ಟದ ಬೋಧನೆ ನೀಡಲಾಗಿದೆ. ತರಬೇತಿ ಮಾರ್ಗದರ್ಶನದ ಜೊತೆಗೆ ವಿವಿಧ ವಿಷಯಗಳ ನುರಿತ ಅಧ್ಯಾಪಕರಿಂದ ಪೋನ್‌ಇನ್ ಕಾರ್ಯಕ್ರಮ ಸಹ ನಡೆಸಲಾಗಿದೆ. ರಾತ್ರಿ ವೇಳೆ ವಿದ್ಯಾರ್ಥಿಗಳ ಶೈಕ್ಷಣಿಕ ಜಾಗೃತಿಗೆ ವಿಶೇಷ ಪರಿಶ್ರಮವಹಿಸಲಾಗಿದೆ ಎಂದರು.

ಇದೇ ಸಂದರ್ಭದಲ್ಲಿ ಬೆಸ್ಕಾಂ ಇಲಾಖೆ ಹಮ್ಮಿಕೊಂಡಿದ್ದ ಪ್ರಬಂಧ ಸ್ಪರ್ಧೆಯಲ್ಲಿ ವಿಜೇತ ಮಕ್ಕಳಿಗೆ ಶಾಸಕರು ಪ್ರಶಸ್ತಿ ಪತ್ರ ವಿತರಿಸಿದರು. ಕಾರ್ಯಕ್ರಮದಲ್ಲಿ ವ್ಯಕ್ತಿವಿಕಾಸನ ಸಂಪನ್ಮೂಲ ವ್ಯಕ್ತಿ ಜಗನ್ನಾಥನಾಡಿಗೇರ, ತಾಲ್ಲೂಕು ದೈಹಿಕ ಶಿಕ್ಷಣಾಧಿಕಾರಿ ಸುನೀಲ್‌ನಾಯ್ಕ, ಅಕ್ಷರದಾಸೋಹ ಅಧಿಕಾರಿ ತಿಪ್ಪೇಸ್ವಾಮಿ, ಮಾರುತಿಭಂಡಾರಿ, ಗಿರೀಶ್, ಕನ್ನಡ ಸಾಹಿತ್ಯ ಪರಿಷತ್ ತಾಲ್ಲೂಕು ಅಧ್ಯಕ್ಷ ಜಿ.ಟಿ.ವೀರಭದ್ರಪ್ಪ, ಪ್ರೌಢಶಾಲಾ ಮುಖ್ಯ ಶಿಕ್ಷಕರ ಸಂಘದ ಅಧ್ಯಕ್ಷ ಡಿ.ಟಿ.ಶ್ರೀನಿವಾಸ್, ಗೌರವಾಧ್ಯಕ್ಷ ಕೆ.ಪಿ.ತಿಪ್ಪೇಸ್ವಾಮಿ, ಪ್ರಧಾನ ಕಾರ್ಯದರ್ಶಿ ಪಾಲಯ್ಯ, ಬೆಸ್ಕಾಂ ಎಇಇ ರಾಜು ಮುಂತಾದವರು ಪಾಲ್ಗೊಂಡಿದ್ದರು.

## ಕ್ಷೇತ್ರದ ಸಾರ್ವಾಂಗೀಣ ಅಭಿವೃದ್ಧಿಗೆ 25 ಕೋಟಿ ರೂಗಳ ಅನುದಾನ



» ಹೊಸದುರ್ಗ

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕ್ಷೇತ್ರದ ಸಾರ್ವಾಂಗೀಣ ಅಭಿವೃದ್ಧಿಗೆ 25 ಕೋಟಿ ರೂಗಳ ಅನುದಾನ ನೀಡಿದ್ದಾರೆ. ಅದರಲ್ಲಿ 8 ಕೋಟಿ ರೂ ವೆಚ್ಚದಲ್ಲಿ ದೇವಾಲಯಗಳ ನಿರ್ಮಾಣ, 13 ಕೋಟಿ ರೂ ವೆಚ್ಚದಲ್ಲಿ ಸಿಸಿ ರಸ್ತೆ ನಿರ್ಮಾಣ ಮಾಡಲಾಗುವುದು ಎಂದು ಆಹಾರ ಮತ್ತು ನಾಗರಿಕ ಸರಬರಾಜು ನಿಗಮದ ಅಧ್ಯಕ್ಷ ಹಾಗೂ ಶಾಸಕ ಬಿ.ಜಿ. ಗೋವಿಂದಪ್ಪ ಹೇಳಿದರು.

ಪಟ್ಟಣದ ಹಿರಿಯೂರು ಮುಖ್ಯ ರಸ್ತೆಯಲ್ಲಿರುವ ಟಿಎಪಿಸಿಎಂಎಸ್ ಸಂಘದ ಖಾಲಿ ನಿವೇಶನದಲ್ಲಿ 1000 ಮೆಟ್ರಿಕ್ ಟನ್ ಸಾಮರ್ಥ್ಯದ ಗೋದಾಮು ಹಾಗೂ 4 ಮಳಿಗೆ ನಿರ್ಮಾಣಕ್ಕೆ ಭೂಮಿಪೂಜೆ ನೆರವೇರಿಸಿ ಮಾತನಾಡಿದರು.

ನೆನೆಗುದಿಗೆ ಬಿದ್ದಿದ್ದ ಸಮುದಾಯ ಭವನ ನಿರ್ಮಾಣಕ್ಕೆ 4 ಕೋಟಿ ರೂ ಅನುದಾನ ನೀಡಲಾಗಿದೆ. ರಾಜ್ಯ ಸರಕಾರ ಆರ್ಥಿಕ ವಿಷಯದಲ್ಲಿ ಶಿಸ್ತು ಬದ್ದವಾಗಿದೆ. ಕ್ಷೇತ್ರಕ್ಕೆ ಬೇಕಾದ ಅನುದಾನ ನೀಡುತ್ತಿದೆ ಎಂದರು.

ಹೊಸದುರ್ಗ ಕ್ಷೇತ್ರದ ಸಾರ್ವಾಂಗೀಣ ಅಭಿವೃದ್ಧಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸಾಕಷ್ಟು ಹಣಕಾಸಿನ ನೆರವು ನೀಡುತ್ತಿದ್ದಾರೆ ಪಡಿತರ ದಾಸ್ತಾನುಗಳನ್ನು ಶೇಖರಣೆ ಮಾಡಲು 1 ಕೋಟಿ ರೂ. ವೆಚ್ಚದಲ್ಲಿ ಗೋದಾಮು ಹಾಗೂ ಸುಸಜ್ಜಿತವಾದ 4 ಮಳಿಗೆ ನಿರ್ಮಿಸಲಾಗುತ್ತಿದೆ. ಬರುವ ಜುಲೈ ತಿಂಗಳೊಳಗೆ ಗೋದಾಮು ಕಟ್ಟಡ ಪೂರ್ಣಗೊಳಿಸುವಂತೆ ಗುತ್ತಿಗೆದಾರರಿಗೆ ಸೂಚನೆ ನೀಡಲಾಗಿದೆ. ಹಿರಿಯೂರು ಮುಖ್ಯ ರಸ್ತೆಯಿಂದ ಸಂಘದ ಗೋದಾಮುಗಳ ಮುಂಭಾಗದವರೆಗೆ ಸಿಸಿ ರಸ್ತೆ ನಿರ್ಮಾಣಕ್ಕೆ ಶಾಸಕರ ಅನುದಾನದಲ್ಲಿ 50 ಲಕ್ಷ ರೂ ಅನುದಾನ ನೀಡಲಾಗುವುದು ಎಂದರು. ಈ ಸಂಧರ್ಬದಲ್ಲಿ ಜಿಲ್ಲಾ ಬ್ಯಾಂಕಿನ ಉಪಾಧ್ಯಕ್ಷ ಎಚ್.ಬಿ.ಮಂಜುನಾಥ್, ನಿರ್ದೇಶಕ ಎಸ್.ಆರ್. ಗಿರೀಶ್, ಟಿಎಪಿಸಿಎಂಎಸ್ ಅಧ್ಯಕ್ಷ ಕಾರೇಹಳ್ಳಿ ಬಸವರಾಜು, ಕಾರ್ಯದರ್ಶಿ ಸಂತೋಷ್, ಪುರಸಭೆ ಸದಸ್ಯ ಜಾಫರ್ ಸಾಕ್, ಮಾಜಿ ಸದಸ್ಯ ವೆಂಕಟೇಶ್ ದಳವಾಯಿ, ಶ್ರೀಧರ್‌ಭಟ್ ಹಾಗೂ ನಿರ್ದೇಶಕರುಗಳು ಉಪಸ್ಥಿತರಿದ್ದರು.

## ಪ್ರಮುಖ ಸುದ್ದಿ

# ವರ್ತಕರಿಂದ ಪಟ್ಟಣದ ಪುಟ್‌ಪಾತ್ ಒತ್ತುವರಿ

» ನಾಗತಿಹಳ್ಳಿಮಂಜುನಾಥ್




ಹೊಸದುರ್ಗ:ಪಟ್ಟಣದಲ್ಲಿ ಜನ–ಜಾನುವಾರುಗಳು ಎಲ್ಲಾ ರೀತಿಯ ವಾಹನಗಳೂ ಸಂಚರಿಸಲು ಯೋಗ್ಯವಾಗಿರುವ ಏಕೈಕ ರಸ್ತೆ ಎಂದರೆ ಅದು ಹೊಸದುರ್ಗ ಪಟ್ಟಣದ ಪೇಟೆ ಬೀದಿ ಎಂಬುದು ಪ್ರಮುಖ ರಸ್ತೆಯಾಗಿದೆ.

ಆದರೆ ಸ್ವಯಂಕೃತ ಅಪರಾಧವೆಂಬಂತೆ ಪೇಟೆಯ ವರ್ತಕರಿಂದ ಜನಸಾಮಾನ್ಯರು ಪೇಚಾಡುವ ಪರಿಸ್ಥಿತಿ ನಿರ್ಮಾಣವಾಗಿದೆ ವರ್ತಕರು ಗ್ರಾಹಕರ ಗಮನ ಸೆಳೆಯಲು ತಮ್ಮ ವಹಿವಾಟಿನ ಅಂಗಡಿಯಿಂದ ಹೊರಬಂದು ಪುಟ್‌ಪಾತ್ ತುಂಬಾ ತಮ್ಮ ಮಾರಾಟ ವಸ್ತುಗಳನ್ನು ಪ್ರದರ್ಶಿಸುತಿದ್ದಾರೆ.

ರಾಜ್ಯ ಸರ್ಕಾರದ ದಿಟ್ಟ ನಿರ್ಧಾರದಿಂದ ಕಿರಿದಾಗಿದ್ದ ಪಟ್ಟಣದ ರಸ್ತೆ ಅಗಲೀಕರಣ ಮಾಡಲಾಯಿತು,ಅಗಲೀಕೃತ ರಸ್ತೆಯ ಇಕ್ಕೆಡೆಗಳಲ್ಲೂ ಬಾಕ್ಸ್ ಚರಂಡಿ ನಿರ್ಮಿಸಿ ಮೇಲೆ ಸಿಮೆಂಟ್ ಹರಡಿ ಜನರ ಸಂಚಾರಕ್ಕೆ ಪುಟ್‌ಪಾತ್ ನಿರ್ಮಿಸಲಾಯಿತು.

ಆದರೆ ಪಾದಚಾರಿಗಳ ಬಳಕೆಗಾಗಿ ಪುಟ್‌ಪಾತ್ ನಿರ್ಮಿಸಿದೆ ಎಂಬ ವಿಚಾರ ಗೊತ್ತಿದ್ದರೂ ಸಹ ಕೆಲವು ವರ್ತಕರು ಸ್ವಹಿತದ ದೃಷ್ಟಿಯಿಂದ ಬಹುಭಾಗ ಪುಟ್‌ಪಾತ್ ಒತ್ತುವರಿ ಮಾಡಿದ್ದಾರೆ.

ಕಳೆದ ಭಾರಿ ಈ ಕ್ಷೇತ್ರದ ಶಾಸಕರಾಗಿದ್ದ ಗೂಳಿಹಟ್ಟಿಶೇಖರ್ ಸುಮಾರು ಎಂದರೆ ನಾಲ್ಕು ಭಾರಿ ಪುಟ್ ಬಾತ್ ತೆರವುಗೊಳಿಸುವ ವಿಚಾರದಲ್ಲಿ ಎನೆಲ್ಲಾ ಅರಸಾಹಸ ಮಾಡಿದರೂ ಸಹಾ ಕಾರ್ಯಗತವಾಗಿಲ್ಲ ಪುರಸಭೆಯವರ ಹಾಗೂ ಪೋಲಿಸ್ ಇಲಾಖೆಯವರ ಜಂಟಿ ಕಾರ್ಯಾಚರಣೆ ಫಲ ನೀಡಲಿಲ್ಲ ಇಂದು ತೆಗೆಸುತ್ತಾರೆ ನಾಲ್ಕು ದಿನ ಬಿಟ್ಟರೆ ಅವರೇ ಸುಮ್ಮನಾಗುತ್ತಾರೆ ಆಮೇಲೆ ಎಥಾ ರಾಜ ತಥಾ ಪ್ರಜಾ ಎನ್ನುವ ಹಠ ವರ್ತಕರದ್ದು.

## ವಿಶೇಷ ವರದಿ

ಕೆಲವು ವರ್ತಕರು ತಮ್ಮ ಅಂಗಡಿ ಒಳ ಭಾಗದಲ್ಲಿ ಡಬೇಕಾದ ಸಾಮಾಗ್ರಿಗಳನ್ನು ಪುಟ್‌ಪಾತ್ ಮೇಲೆ ತುಂಬಿದ್ದಾರೆ,ಕಬ್ಬಿಣದ ಸಾಮಗ್ರಿ ,ಹೂವು ,ಹಣ್ಣು,ವ್ಯಾಪಾರಿ ಉಪ್ಪಿನ ಚೀಲಗಳು,ಚಪ್ಪಲಿ ಬೂಟ್ ಸಾಕ್ಸಗಳು ಪಾತ್ರೆಗಳು ದಿನಸಿ ಚೀಲಗಳು ತಿಂಡಿ ಮಾರಾಟ,ಬಟ್ಟೆಗಳ ಪ್ರದರ್ಶನ ಹೀಗೆ ಒಂದಲ್ಲಾ ಒಂದು ರೀತಿಯಿಂದ ವರ್ತಕರು ಪುಟ್‌ಪಾತ್ ಆಕ್ರಮಿಸಿಕೊಂಡಿದ್ದಾರೆ.

ಪ್ರಸ್ತುತ ಸಾಲಿನಲ್ಲಿ ಹೊಸದುರ್ಗ ಪಟ್ಟಣದ ರಸ್ತೆ ಸ್ವಲ್ಪ ಅಗಲೀಕರಣವಾಗಿದೆ ಆದರೂ ಪುಟ್‌ಬಾತ್ ಎಂಬುದು ಮಾತ್ರ ಮರೀಚಿಕೆಯಾಗಿ ಹೋಗಿದೆ ಎಂಬುದು ನೋವಿನ ಸಂಗತಿ

ಇದರಿಂದ ಜನರು ಬಹಳವಾದ ತೊಂದರೆ ಅನುಭವಿಸುತ್ತಿದ್ದಾರೆ, ಅನೇಕ ರೀತಿಯ ಅವಗಢಗಳು ಪದೇ ಪದೆ ಸಂಭವಿಸುತ್ತಿವೆ.ಜನರು ಸಂಚರಿಸಲು ರಸ್ತೆಗೆ ಇಳಿಯುತ್ತಿದ್ದಾರೆ,ಇದರಿಂದ ವಾಹನಗಳ ಸಂಚಾರಕ್ಕೆ ವಿಪರೀತವಾಗಿ ಅಡಚಣೆಂಯಾಗುತ್ತಿದೆ ದಿನನಿತ್ಯವೂ ಅಪಘಾತಗಳು ಘಟಿಸುತ್ತಿವೆ. ಈವು, ಈ ಕ್ಷೇತ್ರದ ನಿಗಮ ಮಂಡಳಿಯ ಅಧ್ಯಕ್ಷರೂ ಮತ್ತು ಶಾಸಕರಾದ ಬಿ.ಜಿ.ಗೋವಿಂದಪ್ಪನವರು ಈ ವಿಚಾರವಾಗಿ ಗಂಭೀರವಾದ ಚಿಂತನೆ ನಡೆಸಿ ಕಟ್ಟು ನಟ್ಟಿನ ಕ್ರಮ ಕೈಗೊಳ್ಳುವಂತೆ ಪುರಸಭೆಗೆ ಆದೇಶ ನೀಡಬೇಕಿದೆ ಎಂಬುದು ಗಮನಾರ್ಹವಾದ ವಿಷಯ.

ಅದರೂ ಸಹ ಪುಟ್ಪಾತ್ ತೆರವುಗೊಳಿಸಿ ಸುಗಮ ಸಂಚಾರಕ್ಕೆಅವಕಾಶ ಕಲ್ಪಿಸಬೇಕಾದ ಹೊಣೆ ಹೊತ್ತಿರುವ ಪುರಸಭೆ ಮೌನಕ್ಕೆ ಶರಣಾಗಿದೆ. ಈ ಬಗ್ಗೆ ನಿರ್ಧಾಕ್ಷಿಣ್ಯ ಕ್ರಮ ಜರುಗಿಸಲು ಪುರಸಭೆ ಅಧಿಕಾರಿಗಳು ದಾಪುಗಾಲು ಹಾಕಬೇಕೆಂದು ಪಟ್ಟಣದ ನಾಗರೀಕರು ಒತ್ತಾಯಿಸಿದ್ದಾರೆ,

## ಫಾಸ್ಟ್ ನ್ಯೂಸ್

### ಪೋಲಿಯೋ ಲಸಿಕಾ ಕಾರ್ಯಕ್ರಮಕ್ಕೆ ಶಾಸಕ ಗೋವಿಂದಪ್ಪ ಚಾಲನೆ

» ಮೊದಲ ಪುಟದಿಂದ

ಕ್ಷೇತ್ರಆರೋಗ್ಯ ಶಿಕ್ಷಣಾಧಿಕಾರಿ ವೀರೇಂದ್ರ ಪಾಟೀಲ್ ಮಾತನಾಡಿ ತಾಲ್ಲೋಕಿನಾದ್ಯಂತ ಗ್ರಾಮಗಳಲ್ಲಿ, ವಾರ್ಡಗಳಲ್ಲಿ, ಬಸ್ ನಿಲ್ದಾಣ,ರೈಲ್ವೆ ನಿಲ್ದಾಣಗಳಲ್ಲಿ ಪೋಲಿಯೋ ಬೂತ್ ಗಳನ್ನು 03 ನೇ ಮಾರ್ಚ್ ಭಾನುವಾರ ತೆರೆದಿದ್ದು ಸಾರ್ವಜನಿಕರು ಶಾಶ್ವತ ಅಂಗವಿಕಲತೆಯನ್ನು ತರಬಲ್ಲ ಪೋಲಿಯೋವನ್ನು ಎರಡು ಹನಿ ಲಸಿಕೆ ಹಾಕಿಸುವ ಮೂಲಕ ಪ್ರತಿರೋಧಿಸೋಣ ಎಂದು ಕರೆ ನೀಡಿದರು. ಕಾರ್ಯಕ್ರಮದಲ್ಲಿ ಎಸ್.ಜಿ.ಬಿ ಶಾಲೆಯ ಅಧ್ಯಕ್ಷ ಸುರೇಶ್,ಉಪಾಧ್ಯಕ್ಷ ಜಗದೀಶ್, ದಂತ ವೈದ್ಯೆ ಡಾ.ಸುಮಾ, ನಿವೃತ್ತ ಫಾರ್ಮಸಿ ಅಧಿಕಾರಿ ಎಂ.ಆರ್.ಸಿ ಮೂರ್ತಿ,ಆರೋಗ್ಯ ನಿರೀಕ್ಷಣಾಧಿಕಾರಿ ಸಿದ್ದರಾಮಪ್ಪ ಸಮುದಾಯ ಆರೋಗ್ಯ ಕೇಂದ್ರ ಬೆಲಗೂರಿನ ಆರೋಗ್ಯ ಸಿಬ್ಬಂದಿಗಳು,ಆಶಾ ಕಾರ್ಯಕರ್ತೆಯರು,ಅಂಗನವಾಡಿ ಕಾರ್ಯಕರ್ತೆಯರು ಸಾರ್ವಜನಿಕರು, ತಾಯಂದಿರು ಹಾಗೂ ಮಕ್ಕಳು ಪಾಲ್ಗೊಂಡಿದ್ದರು.

### 8 ರಿಂದ ಶ್ರೀ ವನಕಲ್ಲು ಮಲ್ಲೇಶ್ವರ ಜಾತ್ರಾ ಮಹೋತ್ಸವ



» ಚಿತ್ರದುರ್ಗ

ವನಕಲ್ಲು ಮಲ್ಲೇಶ್ವರನ ಮಹಾ ಸಂಸ್ಥಾನದವತಿಯಿಂದ ಮಾ. 8 ರಿಂದ 17ರವರೆಗೆ ಶ್ರೀ ವನಕಲ್ಲು ಮಲ್ಲೇಶ್ವರ ಜಾತ್ರಾ ಮಹೋತ್ಸವ, ವನಕಲ್ಲು ಶ್ರೀ ಪ್ರಶಸ್ತಿ ಪ್ರಧಾನ ವಿವಿಧ ಪ್ರಶಸ್ತಿ ಪ್ರತಿಭೋತ್ಸವ ಹಾಗೂ ಸಂಸ್ಕೃತೋತ್ಸವ ಮತ್ತು ಬ್ರಹ್ಮರಥೋತ್ಸವ ನಡೆಯಲಿದೆ ಎಂದು ಮಠದ ಪೀಠಾಧ್ಯಕ್ಷ ಡಾ. ಶ್ರೀ ಬಸವ ರಮಾನಂದ ಸ್ವಾಮೀಜಿ ತಿಳಿಸಿದರು. ನಗರದ ಪ್ರವಾಸಿ ಮಂದಿರದಲ್ಲಿ ಶುಕ್ರವಾರ ಜಾತ್ರೋತ್ಸವದ ಆಹ್ವಾನ ಪತ್ರಿಕೆ ಬಿಡುಗಡೆ ಮಾಡಿ ಮಾತನಾಡಿ, ನೆಲಮಂಗಲ ತಾಲೂಕಿನ ಡಾಬಸ್ ಪೇಟೆಯ ಹೆಗ್ಗುಂದ ಹಿಂಬಳಿ ಇರುವ ಮಠದಲ್ಲಿ ಮಾರ್ಚ್ 8ರಂದು ಜಾತ್ರೆಗೆ ಚಾಲನೆಯನ್ನು ನೀಡಲಾಗುವುದು. ಅಂದು ಬೆಳಿಗ್ಗೆ ಮಲ್ಲೇಶ್ವರ ದೇವರಿಗೆ ರುದ್ರಾಭಿಷೇಕ, ಪಂಚಲೋಹದ ಕವಚಧಾರಣೆ, ಹೂವಿನ ಅಲಂಕಾರ, ಶಿವರಾತ್ರಿ ಜಾಗರಣೆ ಇತರ ಧಾರ್ಮಿಕ ಪೂಜಾ ಕಾರ್ಯ ನೆರವೇರಲಿದೆ ಎಂದು ಹೇಳಿದರು. 9ರಿಂದ 15ರ ವರೆಗೆ ಸಿದ್ಧಯೋಗಾನಂದ ಶ್ರೀ ಕ್ರಿಕೆಟ್ ಕಪ್ ಹಾಗೂ ವಾಲಿಬಾಲ್ ಪಂದ್ಯಾವಳಿ ಏರ್ಪಡಿಸಲಾಗಿದೆ. ಮಾ.16ರಂದು ಬೆಳಿಗ್ಗೆ 11.30ಕ್ಕೆ ಪ್ರತಿಭೋತ್ಸವ, ಡೊಳ್ಳುಕುಣಿತ, ವೀರಗಾಸೆ, ಕರಡಿವಾದ್ಯ, ಭಜನೆ, ಸಾಂಸ್ಕೃತಿಕ ನಾಟಕೋತ್ಸವ, ಮುದ್ದೇನಹಳ್ಳಿ ಪಾಳ್ಯ ಗ್ರಾಮಸ್ಥರಿಂದ ಬೆಲ್ಲದ ಆರತಿ ಕಾರ್ಯಕ್ರಮ. ಸಂಜೆ 7.30ಕ್ಕೆ ಸಂಸ್ಕೃತ ಸಂಶೋಧನ ಉದ್ಘಾಟನಾ ಸಮಾರಂಭ ನಡೆಯಲಿದೆ. 17ರ ಬೆಳಗ್ಗೆ 10.30ಕ್ಕೆ ವನಕಲ್ಲುಶ್ರೀ, ಜಗಜ್ಯೋತಿ, ವಿಶ್ವಜ್ಯೋತಿ, ಬಾಲಗಂಗಾಧರನಾಥ ನಿರ್ಮಲ ಜ್ಯೋತಿ, ಶರಣಶ್ರೀ ಪ್ರಶಸ್ತಿ ಪ್ರದಾನ ಸಮಾರಂಭ ನಡೆಯಲಿದ್ದು, ಮಧ್ಯಾಹ್ನ 1.30ಕ್ಕೆ ವನಕಲ್ಲು ಮಲ್ಲೇಶ್ವರ ಸ್ವಾಮಿಯ ಬ್ರಹ್ಮ ರಥೋತ್ಸವ ನಡೆಯಲಿದೆ ಎಂದು ಮಾಹಿತಿ ನೀಡಿದರು. ಗೋಷ್ಠಿಯಲ್ಲಿ ಸಮಾಜದ ಮುಖಂಡರಾದ ದೊಡ್ಡಮಲ್ಲಯ್ಯ, ಪ್ರತಾಪ್ ಜೋಗಿ, ಲಕ್ಷ್ಮೀಕಾಂತ, ರಂಗಸ್ವಾಮಿ, ಅರುಣ್ ಕುಮಾರ್, ಗೋವಿಂದ ಸೇರಿದಂತೆ ಇತರರು ಭಾಗವಹಿಸಿದ್ದರು

### 8ನೇ ತರಗತಿ ಪ್ರವೇಶಕ್ಕಾಗಿ ಅರ್ಜಿ ಆಹ್ವಾನ



» ದಾವಣಗೆರೆ

ಮುಂಬರುವ 2024-25 ಸಾಲಿಗೆ ಪರಿಶಿಷ್ಟ ಜಾತಿ ಹಾಗೂ ಅನ್ಯೆರ್ಮಲ್ಯಕರ ವೃತ್ತಿಯಲ್ಲಿ ತೊಡಗಿರುವ ಪೋಷಕರ ಪ್ರತಿಭಾವಂತ ಗಂಡು ಮಕ್ಕಳಿಗೆ ಪ್ರಿತಿಷ್ಟಿತ ಮೈಸೂರಿನ ಶ್ರೀರಾಮಕೃಷ್ಣ ವಿದ್ಯಾಶಾಲೆಯಲ್ಲಿ 8 ನೇ ತರಗತಿಗೆ ಪ್ರವೇಶ ಕಲ್ಪಿಸಲು ಅರ್ಜಿ ಆಹ್ವಾನಿಸಲಾಗಿದೆ.

ಏಪ್ರಿಲ್ 11 ರಂದು ಬೆಳಿಗ್ಗೆ 10 ಗಂಟೆಗೆ ಶ್ರೀ. ರಾಮಕೃಷ್ಣ ವಿದ್ಯಾಶಾಲೆ, ಯಾದವಗಿರಿ, ಮೈಸೂರು ಇಲ್ಲಿ ಆಯ್ಕೆ ಪ್ರವೇಶ ಪರೀಕ್ಷೆ ಇರುತ್ತದೆ. ಇದಕ್ಕೆ ಸಂಬಂಧಿಸಿದ ಅರ್ಜಿಯನ್ನು ಉಪನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ, ಕೊಠಡಿ ಸಂಖ್ಯೆ 37, ಮೊದಲನೇ ಮಹಡಿ, ಜಿಲ್ಲಾಡಳಿತ ಭವನ, ದಾವಣಗೆರೆ ಇಲ್ಲಿ ಪಡೆಯಬಹುದು. ಭರ್ತಿ ಮಾಡಿದಅರ್ಜಿಯನ್ನುಅಗತ್ಯದಾಖಲೆಗಳೊಂದಿಗೆ ಮಾ.22 ರೊಳಗೆ ಕಚೇರಿಗೆ ಸಲ್ಲಿಸಬೇಕೆಂದು ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ನಾಗರಾಜ ತಿಳಿಸಿದ್ದಾರೆ.

ಕಬೀರಾನಂದಾಶ್ರಮದಲ್ಲಿ ಸಿದ್ಧತೆ -ಸಪ್ತಾಹದ ಅಧ್ಯಕ್ಷ ಕೆ.ಸಿ.ನಾಗರಾಜು ಮಾಹಿತಿ

# ಮಹಾ ಶಿವರಾತ್ರಿ ಮಹೋತ್ಸವಕ್ಕೆ ದಿನಗಣನೆ

» ಚಿತ್ರದುರ್ಗ

94ನೇ ಮಹಾ ಶಿವರಾತ್ರಿ ಮಹೋತ್ಸವವೂ ಮಾ.4 ರಿಂದ 9ರವರೆಗೆ ನಗರದ ಶ್ರೀ ಕಬೀರಾನಂದಾಶ್ರಮದ ವತಿಯಿಂದ ಶ್ರೀಮಠದಆವರಣದಲ್ಲಿನಿರ್ಮಿತವಾಗಿರುವ ಶ್ರೀ ಸದ್ಗುರು ಕಬೀರಾನಂದಸ್ವಾಮಿ ಮಹಾ ಮಂಟಪದಲ್ಲಿ ನಡೆಯಲಿದೆ. ಪ್ರತಿ ದಿನ ನಾಡಿನ ವಿವಿಧ ಮಠಾಧೀಶರು, ಸಾಹಿತಿಗಳು, ವಿಚಾರವಂತರು ಆಗಮಿಸುವುದರ ಮೂಲಕ ತಮ್ಮ ವಿಚಾರಧಾರೆಯನ್ನು ನೀಡಲಿದ್ದಾರೆ ಎಂದು 94ನೇ ಮಹಾ ಶಿವರಾತ್ರಿ ಸಪ್ತಾಹದ ಅಧ್ಯಕ್ಷ ಕೆ.ಸಿ.ನಾಗರಾಜು ತಿಳಿಸಿದರು.



ನಗರದ ಶ್ರೀಮಠದ ಆವರಣದಲ್ಲಿ ಶನಿವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮಾ.4ರ ಸಂಜೆ 6.30ಕ್ಕೆ ನಡೆಯುವ ಶಿವನಾಮ ಸಪ್ತಾಹದಲ್ಲಿ ವಿಜಯಪುರದ ಶ್ರೀ ಷಣ್ಮುಖಾರೂಢ ಮಠದ ಶಾಂತಾಶ್ರಮದ ಶ್ರೀ ಅಭಿನವ ಸಿದ್ಧಾರೂಢ ಶ್ರೀ, ಹುಬ್ಬಳ್ಳಿಯ ಜಡೆ ಸಿದ್ದೇಶ್ವರ ಮಠದ ಶ್ರೀ ರಮಾನಂದ ಶ್ರೀ, ಬಾಗಲಕೋಟೆಯ ಆರಿಕೆರೆಯ ಶ್ರೀ ಕೌಧೀಶ್ವರ ಮಹಾ ಸಂಸ್ಥಾನದ ಶ್ರೀ ಮಾಧವಾನಂದ ಶ್ರೀ ಸಾನಿಧ್ಯವನ್ನು ವಹಿಸಲಿದ್ದಾರೆ ಎಂದರು.

ಸಭಾಮಂಟಪವನ್ನು ಯೋಜನೆ ಮತ್ತು ಸಾಂಖ್ಯಿಕ ಖಾತೆ ಸಚಿವ ಡಿ.ಸುಧಾಕರ್ ಹಾಗೂ ಕಾರ್ಯಕ್ರಮವನ್ನು ಶಾಸಕರಾದ ವೀರೇಂದ್ರಪಪ್ಪಿ ಉದ್ಘಾಟನೆ ಮಾಡಲಿದ್ದಾರೆ. ವಿಧಾನ ಪರಿಷತ್ ಸದಸ್ಯರಾದ ಎನ್. ರವಿಕುಮಾರ್, ಕೆ.ಎಸ್.ನವೀನ್, 94ನೇ ಮಹಾ ಶಿವರಾತ್ರಿ ಸಪ್ತಾಹದ ಅಧ್ಯಕ್ಷರಾದ ಕೆ.ಸಿ.ನಾಗರಾಜು, ಜಿಲ್ಲಾ ರಕ್ಷಣಾಧಿಕಾರಿ ಧರ್ಮೇಂದರ್ ಕುಮಾರ್ ಮೀನಾ, ನಗರಾಭಿವೃದ್ಧಿ ಪ್ರಾಧಿಕಾರದ ಮಾಜಿ ಅಧ್ಯಕ್ಷರಾದ ಬದರಿನಾಥ್, ಜಿ.ಟಿ.ಸುರೇಶ್, ಆಯುಕ್ತರಾದ ಸೋಮಶೇಖರ್, ಮರ್ಚೆಂಟ್ ಬ್ಯಾಂಕ್ ಅಧ್ಯಕ್ಷ ಲಕ್ಷ್ಮೀಕಾಂತರೆಡ್ಡಿ, ಬಿಜೆಪಿ ಮುಖಂಡ ಲಿಂಗಮೂರ್ತಿ, ಕಾಂಗ್ರೆಸ್ ಮುಖಂಡ ಎಂ.ಎ.ಸೇತುರಾಂ. ನಗರಸಭೆ ಮಾಜಿ ಅಧ್ಯಕ್ಷ ಬಿ.ಕಾಂತರಾಜ್ ಭಾಗವಹಿಸಲಿದ್ದಾರೆ ಎಂದರು.

ಮಾ.5ರ ಸಂಜೆ 6.30ಕ್ಕೆ ನಡೆಯುವ ಶಿವನಾಮ ಸಪ್ತಾಹ ಕಾರ್ಯಕ್ರಮದ ದಿವ್ಯ ಸಾನಿಧ್ಯವನ್ನು ಶ್ರೀ ಕ್ಷೇತ್ರ ಅದಿಚುಂಚನಗಿರಿ ಮಹಾಸಂಸ್ಥಾನದ ಪೀಠಾಧ್ಯಕ್ಷರಾದ ಡಾ.ನಿರ್ಮಲಾನಂದ ಶ್ರೀ, ಪ್ರಧಾನ ಕಾರ್ಯದರ್ಶಿಗಳಾದ ಶ್ರೀ ಪ್ರಸನ್ನನಾಥ ಶ್ರೀ, ಶ್ರೀ ಶಿವಶರಣ ಮಾದಾರ ಚನ್ನಯ್ಯ ಗುರುಪೀಠದ ಶ್ರೀ ಬಸವಮೂರ್ತಿ ಮಾದಾರ ಚನ್ನಯ್ಯ ಶ್ರೀ ಹಾಗೂ ಬೀದರ್‌ನ ಮುಚಳಾಂಬದ ಶ್ರೀ ನಾಗಭೂಷಣ ಮಠದ ಶ್ರೀ ಪ್ರಣವಾನಂದ ಶ್ರೀ ವಹಿಸಲಿದ್ದಾರೆ ಎಂದು ತಿಳಿಸಿದರು.

ಕೇಂದ್ರಸಾಮಾಜಿಕನ್ಯಾಯಸಬಲೀಕರಣ ಸಚಿವ ಎ.ನಾರಾಯಣಸ್ವಾಮಿ, ಶಾಸಕ ಎಂ.ಚಂದ್ರಪ್ಪ, ಮಾಜಿ ಸಚಿವರಾದ ಹೆಚ್. ಆಂಜನೇಯ, ಶ್ರೀರಾಮುಲು, ಮಾಜಿ ಶಾಸಕ ಎಸ್.ಕೆ.ಬಸವರಾಜನ್, ಬಿಜೆಪಿ ಅಧ್ಯಕ್ಷ ಎ.ಮುರಳಿ, ಮುಖಂಡರಾದ ಅನಿತ್ ಕುಮಾರ್, ಮಹಮ್ಮದ್ ಪಾಷ, ವೀರಶೈವ ಬ್ಯಾಂಕ್ ಅಧ್ಯಕ್ಷರಾದ ಪಟೇಲ್ ಶಿವಕುಮಾರ್, ವಾಣಿಜ್ಯೋದ್ಯಮಿಗಳಾದ ಶಂಕರ್‌ಮೂರ್ತಿ, ಬಿ.ಟಿ.ಸಿದ್ದೇಶ್ವರ್, ಸಿದ್ದಾಪುರದ ನಾಗಣ್ಣ, ಚಲನಚಿತ್ರ ನಟ ದೊಡ್ಡಣ್ಣ, ಜಿಲ್ಲಾಧಿಕಾರಿ ವೆಂಕಟೇಶ್, ಕಸಾಪ ಅಧ್ಯಕ್ಷ ಶಿವಸ್ವಾಮಿ, ವಿಹಿಂಪನ ದಕ್ಷಿಣ ಪ್ರಾಂತದ ವಿಶೇಷ ಸಂಪರ್ಕ ಪ್ರಮುಖ್ ಮಂಜುನಾಥ್ ಸ್ವಾಮಿ, ವಕ್ಫ್ ಬೋರ್ಡ್ ಅಧ್ಯಕ್ಷರಾದ ಅನ್ವರ್ ಪಾಷ ಸೇರಿದಂತೆ ಇತರರು ಭಾಗವಹಿಸಲಿದ್ದಾರೆ ಎಂದರು.

ಮಾ. 6ರ ಸಂಜೆ 6.30ಕ್ಕೆ ನಡೆಯುವ ಕಾರ್ಯಕ್ರಮದ ಸಾನಿಧ್ಯವನ್ನು ಬೆಂಗಳೂರಿನ ಗವಿಪುರಂನ ಶ್ರೀ ಭವಾನಿ ದತ್ತ ಮಠದ ಶ್ರೀ ಮಂಜುನಾಥ್ ಭಾರತಿ ಶ್ರೀ, ಹಾಸನದ ಶ್ರೀ ಆದಿಚುಂಚುನಗಿರಿಯ ಶಾಖಾ ಮಠದ ಶ್ರೀ ಶಂಬುನಾಥ್ ಶ್ರೀ, ಚಿತ್ರದುರ್ಗದ ಯೋಗವನ ಬೆಟ್ಟದ ವನಶ್ರೀ ಮಠದ ಅಧ್ಯಕ್ಷ ಡಾ.ಶ್ರೀ ಬಸವಕುಮಾರ್ ಶ್ರೀಗಳು ವಹಿಸಲಿದ್ದಾರೆ. ಶಾಸಕರಾದ ಟಿ.ರಘುಮೂರ್ತಿ, ಬಿ.ದೇವೇಂದ್ರಪ್ಪ, ಲೋಕಸಭಾ ಮಾಜಿ ಸದಸ್ಯ ಎಂ.ಚಂದ್ರಪ್ಪ, ಜಿ.ಪಂ. ಸಿಇಓ ಸೋಮಶೇಖರ್, ಮಾಜಿ ಶಾಸಕ ಜಿ.ಎಚ್.ತಿಪ್ಪಾರೆಡ್ಡಿ, ಹಿಂದೂ ಜಾಗರಣ ವೇದಿಕೆಯ ಪ್ರಮುಖ್ ದೊ. ಕೇಶವಮೂರ್ತಿ, ವಿ.ಹಿ.ಪಂ.ನ ಜಗನ್ನಾಥ್ ಶಾಸ್ತ್ರಿಗಳು, ಹುಬ್ಬಳ್ಳಿಯ ಶ್ರೀ ಸಿದ್ದಾರೂಢ ಮಠದ ಚೇರ್‌ಮನ್ ಬಸವರಾಜ್ ಶೆಟ್ಟರು ಭಾಗವಹಿಸಲಿದ್ದಾರೆ.

ಮಾ.7ರ ಸಂಜೆ 6.30ಕ್ಕೆ ನಡೆಯುವ ಕಾರ್ಯಕ್ರಮದ ಸಾನಿಧ್ಯವನ್ನು ಹೊಸದುರ್ಗದ ಬ್ರಹ್ಮವಿದ್ಯಾನಗರದ ಶಿಲಾಪುರಿ ಉಪ್ಪಾರ ಭಗೀರಥ ಮಹಾ ಸಂಸ್ಥಾನದ ಶ್ರೀ ಪುರುಷೋತ್ತಮಾನಂದಪುರಿ ಶ್ರೀ, ಶೃಂಗೇರಿಯ ಶ್ರೀ ಆದಿಚುಂಚನಗಿರಿ ಶಾಖಾಮಠದ ಶ್ರೀ ಗುಣನಾಥ್ ಶ್ರೀ, ಚಿಕ್ಕಬಳ್ಳಾಪುರದ ಶ್ರೀ ಮಂಗಳನಾಥ್ ಶ್ರೀ ವಹಿಸಲಿದ್ದಾರೆ.

ಮಾ.8 ಮಧ್ಯಾಹ್ನ 2.30ಕ್ಕೆ ನಗರದ ರಾಜ ಬೀದಿಗಳಲ್ಲಿ ಶ್ರೀ ಕಬೀರಾನಂದ ಕ್ರೀಡಾ ಮತ್ತು ಸಾಂಸ್ಕೃತಿಕ ಸಂಘ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ಶ್ರೀ ಮಠದ ಪೀಠಾಧ್ಯಕ್ಷರಾದ ಶ್ರೀ ಶಿವಲಿಂಗಾನಂದ ಶ್ರೀಗಳ ಪಲ್ಲಕ್ಕಿ ಉತ್ಸವ ಹಾಗೂ ಜನಪದ ಉತ್ಸವ ನಡೆಯಲಿದೆ.

ಸಂಜೆ 7ಕ್ಕೆ ನಡೆಯುವ ಕಾರ್ಯಕ್ರಮದ ಸಾನಿಧ್ಯವನ್ನು ಚಳ್ಳಕೆರೆಯ ಶ್ರೀ ಸದ್ಗುರು ನರಹರಿ ಪೀಠದ ಪೀಠಾಧಿಪತಿಗಳಾದ ಶ್ರೀ ರಾಜಾರಾಮ್ ಶ್ರೀಗಳು, ಹಾವೇರಿಯ ಕೂಸನೂರಿನ ಶ್ರೀ ತಿಪ್ಪಯ್ಯಸ್ವಾಮಿ ಮಠದ ಶ್ರೀ ಜ್ಯೋತಿರ್ಲಿಂಗಾನಂದ ಶ್ರೀಗಳು ಹಾಗೂ ಇಲಕಲ್ಲ ಶ್ರೀ ಚಿದಾನಂದಸ್ವಾಮಿ ಶ್ರೀ ಗುರು ಬಿಷ್ಠಯ್ಯಸ್ವಾಮಿ ಅವಧೂತರ ಮಠದ ಮಾತೋಶ್ರೀ ಶ್ರೀ ಶರಣಮ್ಮ ತಾಯಿ ಆಗಮಿಸಲಿದ್ದಾರೆ.

ಮಾ.9 ರಂದು ಬ್ರಾಹ್ಮೀ ಮಹೂರ್ತದಲ್ಲಿ ಶಿವಮಹಿಮ್ನಾ ಸ್ತೋತ್ರ ಸ್ನಾನದೊಂದಿಗೆ ಸಪ್ತಾಹ ಸಮಾಪ್ತಿಯಾಗಲಿದ್ದು, ಸಂಜೆ 5 ಕ್ಕೆ ಸನ್ಯಾಸಿ ವಿಧಿಯಂತೆ ಕೌದಿ ಪೂಜೆ ಕಾರ್ಯಕ್ರಮ ನಡೆಯಲಿದ್ದು, ಕುಂಬಳಗೂಡಿನ ಬಿ,ಜಿ.ಎಸ್.ಗ್ರೂಪ್‌ನ ಎಸಿಎಂ, ಮಠದ ವ್ಯವಸ್ಥಾಪಕ ನಿರ್ದೇಶಕರಾದ ಶ್ರೀಪ್ರಕಾಶನಾಥ ಶ್ರೀಗಳು ಭಾಗವಹಿಸಲಿದ್ದಾರೆ ಎಂದರು.

ಶ್ರೀ ಸದ್ಗುರು ಕಬೀರಾನಂದಾಶ್ರಮದ ಪೀಠಾಧ್ಯಕ್ಷರಾದ ಶ್ರೀ ಶಿವಲಿಂಗಾನಂದ ಶ್ರೀಗಳು ಮಾತನಾಡಿ, ಶಿವಪೂಜೆ ಮತ್ತು ಉಪವಾಸ ನಾನಾ ರೀತಿಯಲ್ಲಿ ಭಕ್ತರು ಆಚರಿಸುವ ಮೂಲಕ ಮಹಾ ಶಿವರಾತ್ರಿಯನ್ನು ತನ್ನದೆ ಆದ ವಿಶಿಷ್ಟ ರೀತಿಯಲ್ಲಿ ನಡೆಸುತ್ತಿದ್ದಾರೆ. ಶ್ರೀ ಸದ್ಗುರು ಕಬೀರಾನಂದ ಮಹಾಸ್ವಾಮಿಗಳ ಆದೇಶದಂತೆ ಚಿತ್ರದುರ್ಗದಲ್ಲಿ ಮಾನವರ ಕಲ್ಯಾಣಕ್ಕಾಗಿ ಸ್ಥಾಪಿಸಿದ ಆದ್ವೈತ, ಜಾತ್ಯಾತೀತ ಸಂಪ್ರದಾಯ ಮಠವೇ ಶ್ರೀ ಸದ್ಗುರು ಕಬೀರಾನಂದ ಆಶ್ರಮವಾಗಿದೆ. ಗುರುಗಳ ಪರಂಪರೆಯಂತೆ ಪ್ರತಿ ವರ್ಷವೂ ಶಿವನಾಮ ಸಪ್ತಾಹವನ್ನು ಮಹಾ ಶಿವರಾತ್ರಿ ಸಮಯದಲ್ಲಿ ನಡೆಸಿಕೊಂಡು ಬರುತ್ತಿದೆ. ಇದು ಮಠದ ವೈಶಿಷ್ಟವಾಗಿದೆ. ಶಿವನಾಮ ಸಪ್ತಾಹವನ್ನು ಜಾತಿ-ಮತಗಳ ಚೌಕಟ್ಟನ್ನು ಮೀರಿ ನಾಡಿನ ಜನರ ಭಾವೈಕ್ಯ ಸಾಧನೆಯನ್ನು ಮಾಡಲಾಗುತ್ತಿದೆ ಎಂದು ತಿಳಿಸಿದರು.

ಕಾರ್ಯದರ್ಶಿ ಪ್ರಶಾಂತ್, ಸಮಿತಿಯ ಉಪಾಧ್ಯಕ್ಷ ಸಿದ್ದವ್ವನಹಳ್ಳಿ ಪರಮೇಶ್, ಸದಸ್ಯರಾದ ಓಂಕಾರ್, ಪ್ರತಾಪ್ ಜೋಗಿ, ಗೋಪಾಲಸ್ವಾಮಿ ನಾಯ್ಕ್, ನಾಗರಾಜ್ ಸಂಗಂ ಸತೀಶ್, ರುದ್ರೇಶ್, ನಿರಂಜನ, ತಿಪ್ಪೇಸ್ವಾಮಿ, ಗಣಪತಿ ಶಾಸ್ತ್ರಿ ಇದ್ದರು.

## ಸಾರ್ವಜನಿಕ ಆಸ್ಪತ್ರೆ ಆವರಣದಲ್ಲಿ ನಿಂತಿದ್ದ ಮೋಟಾರ್ ಬೈಕ್‌ಗಳ ತೆರವು ಕಾರ್ಯಾಚರಣೆ





» ಚಳ್ಳಕೆರೆ

ನಗರದ ಸಾರ್ವಜನಿಕ ಆಸ್ಪತ್ರೆ ಆವರಣದಲ್ಲಿ ಯಾವುದೇ ಅನುಮತಿ ಇಲ್ಲದೆ ಬೈಕ್‌ಗಳನ್ನು ಎಲ್ಲಂದರಲ್ಲಿ ಬಿಟ್ಟುಹೋಗುತ್ತಿದ್ದು, ಇದರಿಂದ ರೋಗಿಗಳನ್ನು ಹೊತ್ತು ತರುವ ಅಂಬ್ಯುಲೆನ್ಸ್, ರೋಗಿಗಳು ಹಾಗೂ ಸಾರ್ವಜನಿಕರಿಗೆ ಅಡಚಣೆಯಾಗುತ್ತಿದ್ದು, ಈ ಹಿನ್ನೆಲೆಯಲ್ಲಿ ಆಸ್ಪತ್ರೆ ಆವರಣದಲ್ಲಿ ನಿಲ್ಲಿಸಿದ್ದ ಸುಮಾರು 20ಕ್ಕೂ ಹೆಚ್ಚು ಬೈಕ್‌ಗಳನ್ನು ಪೊಲೀಸರು ವಶಪಡಿಸಿಕೊಂಡು ಪ್ರಕರಣ ದಾಖಲಿಸಿದ್ದಾರೆ.

ಈ ಬಗ್ಗೆ ಮಾಹಿತಿ ನೀಡಿದ ಠಾಣಾ ಇನ್ಸ್‌ಪೆಕ್ಟರ್ ಕೆ.ಕುಮಾರ್, ಸಾರ್ವಜನಿಕ ಆಸ್ಪತ್ರೆಗೆ ಪ್ರತಿನಿತ್ಯ 24 ಗಂಟೆಗಳ ಕಾಲ ಕರ್ತವ್ಯ ನಿರ್ವಹಿಸಲಾಗುತ್ತಿದೆ. ಆದರೆ, ಸಾರ್ವಜನಿಕರು ಅನಿವಾರ್ಯ ಸಂದರ್ಭದಲ್ಲಿ ಬೈಕ್ ನಿಲುಗಡೆ ಮಾಡಲು ಅವಕಾಶವಿದೆ. ಆದರೆ, ಯಾವುದೇ ಶುಲ್ಕ ಪಾವತಿಸದೆ, ಅನುಮತಿ ಪಡೆಯದೆ ಬೈಕ್ ನಿಲ್ಲಿಸಿ ಹೊರಗೆ ಹೋಗುವ ಮೂಲಕ ರೋಗಿಗಳು, ಸಾರ್ವಜನಿಕರಿಗೆ ಅಡಚರಣೆಯಾಗುತ್ತಿತ್ತು. ಈ ಹಿನ್ನೆಲೆಯಲ್ಲಿ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಿಲ್ಲಿಸಿದ್ದ ಇನ್ಸ್‌ಪೆಕ್ಟರ್ ಕೆ.ಕುಮಾರ್ ಬಹಳ ದಿನಗಳಿಂದ ಅಲ್ಲೇ ನಿಲ್ಲಿಸಿದ್ದ ಮೋಟಾರ್ ಬೈಕ್‌ಗಳನ್ನು ಅಲ್ಲಿಂತ ತೆರೆಗೊಳಿಸಿ ಠಾಣೆಗೆ ತಂದಿರುತ್ತಾರೆ. ಈ ಸಂದರ್ಭದಲ್ಲಿ ಪೊಲೀಸ್ ಇಲಾಖೆ ಅಧಿಕಾರಿಗಳು ಸಾರ್ವಜನಿಕರಲ್ಲಿ ಮನವಿ ಮಾಡಿ, ಯಾರೇ ಆದರೂ ಬೈಕ್ ಅಡ್ಡನಿಲ್ಲಿಸಿದ್ದಲ್ಲಿ ಪೊಲೀಸ್ ಠಾಣೆಗೆ ಮಾಹಿತಿ ನೀಡಿದರೆ ಸಾಕು ಕಾರ್ಯಾಚರಣೆ ನಡೆಸಲಾಗುವುದು ಎಂದು ತಿಳಿಸಿದ್ದಾರೆ. ಪಿಎಸ್ಐ ಕೆ.ಸತೀಶ್‌ನಾಯ್ಕ, ಜೆ.ಶಿವಕುಮಾರ್, ಎಎಸ್ಐ ರವಿಕುಮಾರ್, ಪೇದೆಗಳಾದ ವೆಂಕಟೇಶ್,ಶಿವಾನಂದಮಡಿವಾಳ, ಹಾಲೇಶ್, ಸಂತೋಷ್‌ನಾಯ್ಕ ಮುಂತಾದವರು ಕಾರ್ಯಾಚರಣೆ ನಡೆಸಿದರು.

## ಜಡೇಕುಂಟೆ-ಕಾಪರಹಳ್ಳಿ 2 ಕೋಟಿ ವೆಚ್ಚದ ಸಿಸಿ ರಸ್ತೆಗೆ ಭೂಮಿ ಪೂಜೆ



» ಚಳ್ಳಕೆರೆ

ಪ್ರಸ್ತುತ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ನೇತೃತ್ವದ ಕಾಂಗ್ರೆಸ್ ಸರ್ಕಾರ ಜನತೆಗೆ ನೀಡಿದ ಐದು ಗ್ಯಾರಂಟಿಗಳ ಈಡೇರಿಕೆ ಜೊತೆಗೆ ಅಭಿವೃದ್ದಿ ಕಾಮಗಾರಿಗೂ ಹಣ ಬಿಡುಗಡೆ ಮಾಡುತ್ತಿದೆ. ರಾಜ್ಯದಲ್ಲಿ ಅಭಿವೃದ್ದಿ ಹಿನ್ನೆಡೆವೆಂಬ ಬಿಜೆಪಿ ವಾದಕ್ಕೆ ಯಾವುದೇ ಹುರಿಳಿಲ್ಲವೆಂದು ಸಣ್ಣ ಕೈಗಾರಿಕೆ ಅಭಿವೃದ್ದಿ ಮಂಡಳಿ ಅಧ್ಯಕ್ಷ ಹಾಗೂ ಶಾಸಕ ಟಿ.ರಘುಮೂರ್ತಿ ತಿಳಿಸಿದರು. ಅವರು, ಶನಿವಾರ ಸಾಣಿಕೆರೆ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಕಾಪರಹಳ್ಳಿ-ಜಡೇಕುಂಟೆ ಶಿಥಿಲಗೊಂಡ ರಸ್ತೆಗಳನ್ನು ಸುಮಾರು ಎರಡು ಕೋಟಿ ವೆಚ್ಚದ ಸಿಸಿ ರಸ್ತೆಯ ನಿರ್ಮಾಣ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿ ಮಾತನಾಡಿದರು. ಕಳೆದ ಹಲವಾರು ವರ್ಷಗಳಿಂದ ಈ ಭಾಗದ ಜನರು ರಸ್ತೆ ಅಭಿವೃದ್ದಿಯ ಬಗ್ಗೆ ಹಲವಾರು ಬಾರಿ ಮನವಿ ಮಾಡಿದ್ದರು. ಈ ಬಗ್ಗೆ ಸರ್ಕಾರಕ್ಕೂ ಸಹ ಮನವಿ ನೀಡಿದ್ದು, ಕೆಲವಾರು ವರ್ಷಗಳ ನಂತರ ಈ ಕಾಮಗಾರಿ ಆರಂಭಕ್ಕೆ ಇಂದು ಭೂಮಿ ಪೂಜೆ ನೆರವೇರಿಸುವ ಮೂಲಕ ಚಾಲನೆ ನೀಡಲಾಗುತ್ತಿದೆ.

**ಪ್ರಮುಖ ಸುದ್ದಿ**


ಚಳ್ಳಕೆರಿ ನಗರದಲ್ಲಿ 700 ಮನೆಗಳ ಲೋಕಾರ್ಪಣೆ ಕಾರ್ಯಕ್ರಮದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್

# ಬಡವರ ಆರ್ಥಿಕ ಸಬಲೀಕರಣ ಕಾರ್ಯಕ್ರಮಗಳಿಗೆ ಹೆಚ್ಚಿನ ಒತ್ತು

» ಚಿತ್ರದುರ್ಗ

ರಾಜ್ಯ ಸರ್ಕಾರದಿಂದ ಬಡವರಿಗೆ, ಶೋಷಿತ ವರ್ಗದವರ ಆರ್ಥಿಕ ಸಬಲೀಕರಣಕ್ಕಾಗಿ, ಆರ್ಥಿಕ ಚೈತನ್ಯ ನೀಡುವ ಕಾರ್ಯಕ್ರಮಗಳಿಗೆ ಹೆಚ್ಚಿನ ಒತ್ತು ನೀಡಲಾಗುವುದು ಎಂದು ಯೋಜನೆ ಮತ್ತು ಸಾಂಖ್ಯಿಕ ಇಲಾಖೆ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಹೇಳಿದರು.

ವಸತಿ ಇಲಾಖೆ, ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿ ವತಿಯಿಂದ ಪ್ರಧಾನಮಂತ್ರಿ ಆವಾಸ್ ಯೋಜನೆ "ಸರ್ವರಿಗೂ ಸೂರು" ಯೋಜನೆಯಡಿ ಚಳ್ಳಕೆರೆ ನಗರದ ಅಂಬೇಡ್ಕರ್ ನಗರದಲ್ಲಿ ನಿರ್ಮಾಣವಾದ 700 ಮನೆಗಳನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ವರ್ಚ್ಯುಯಲ್ ಮುಖಾಂತರ ಲೋಕಾರ್ಪಣೆ ಹಾಗೂ ಮನೆ ಹಂಚಿಕೆ ಸಮಾರಂಭದಲ್ಲಿ ಭಾಗವಹಿಸಿ ಅವರು ಮಾತನಾಡಿದರು.



"ಸರ್ವರಿಗೂ ಸೂರು" ಯೋಜನೆಯಡಿ ವಸತಿ ರಹಿತರು ಸಾಕಷ್ಟು ಸಂಖ್ಯೆಯಲ್ಲಿ ಅರ್ಜಿ ಸಲ್ಲಿಸಿದ್ದು, ವಸತಿ ರಹಿತರು ಯಾರೂ ಸಹ ನಿರಾಸೆ ಪಡುವ ಅಗತ್ಯವಿಲ್ಲ. ಮುಂದಿನ ದಿನಗಳಲ್ಲಿ ಇನ್ನೂ ಹೆಚ್ಚಿನ ಮನೆಗಳ ಮಂಜೂರಾತಿಗೆ ಅಗತ್ಯ ಕ್ರಮ ವಹಿಸಲಾಗುವುದು ಎಂದು ಸಚಿವರು ಭರವಸೆ ನೀಡಿದರು.

ಚಳ್ಳಕೆರೆ ಶಾಸಕ ಟಿ.ರಘುಮೂರ್ತಿ ಮಾತನಾಡಿ, ಚಳ್ಳಕೆರೆ ನಗರದ ಡಾ.ಬಿ.ಆರ್. ಅಂಬೇಡ್ಕರ್ ನಗರದಲ್ಲಿ 2017ರ ಡಿಸೆಂಬರ್ 27ರಂದು ಮನೆಗಳ ನಿರ್ಮಾಣಕ್ಕೆ ಶಂಕುಸ್ಥಾಪನೆ ನೆರವೇರಿಸಲಾಗಿತ್ತು. ಕಳೆದ ಸರ್ಕಾರದ ಅವಧಿಯಲ್ಲಿ ಬೇರೆ ಬೇರೆ ಕಾರಣಗಳಿಂದಾಗಿ ಮನೆಗಳ ನಿರ್ಮಾಣ ಕಾಮಗಾರಿ ಕುಂಠಿತವಾಯಿತು ಎಂದು ತಿಳಿಸಿದ ಅವರು, ಚಳ್ಳಕೆರೆ ನಗರದಲ್ಲಿ 1,127 ಮನೆಗಳು ಮಂಜೂರಾಗಿದ್ದು, ಇದರಲ್ಲಿ 700 ಮನೆಗಳು ಪೂರ್ಣಗೊಂಡಿವೆ. ಇನ್ನೂ 300ಕ್ಕೂ ಹೆಚ್ಚು ಮನೆಗಳು ವಿವಿಧ ಹಂತಗಳಲ್ಲಿ ಪ್ರಗತಿಯಲ್ಲಿದ್ದು, ಆದಷ್ಟು ಶೀಘ್ರದಲ್ಲಿ ಮನೆಗಳ ನಿರ್ಮಾಣ ಮಾಡಬೇಕು ಎಂದು ಅಧಿಕಾರಿಗಳಿಗೆ ತಿಳಿಸಿದರು.

ರಾಜ್ಯ ಸರ್ಕಾರ ಬಹುಮುಖ್ಯವಾಗಿ ಐದು ಗ್ಯಾರಂಟಿ ಯೋಜನೆಗಳನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸಿದೆ. ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನದ ಜೊತೆ ಜೊತೆಗೆ ಅಭಿವೃದ್ಧಿ ಕಾರ್ಯಕ್ರಮಗಳಿಗೂ ಒತ್ತು ನೀಡಲಾಗುವುದು ಎಂದು ಹೇಳಿದರು.

ಸರ್ವರಿಗೂ ಸೂರು ಯೋಜನೆ: ಪ್ರಧಾನ ಮಂತ್ರಿ ಆವಾಸ್ ಯೋಜನೆ-ಸರ್ವರಿಗೂ ಸೂರು ಯೋಜನೆಯಡಿ ಚಿತ್ರದುರ್ಗ ಜಿಲ್ಲೆಯ ಚಿತ್ರದುರ್ಗ ತಾಲ್ಲೂಕಿನಲ್ಲಿ 1518, ಚಳ್ಳಕೆರೆ-1127, ಹಿರಿಯೂರು-1465, ಹೊಳಲ್ಕೆರೆ-533, ಹೊಸದುರ್ಗ-700 ಹಾಗೂ ಮೊಳಕಾಲ್ಮುರು ತಾಲ್ಲೂಕಿನಲ್ಲಿ 500 ಮನೆಗಳು ಸೇರಿದಂತೆ ಆರು ನಗರ, ಪಟ್ಟಣದ ವ್ಯಾಪ್ತಿಯಲ್ಲಿ ಒಟ್ಟು ರೂ.370.97 ಕೋಟಿ ಯೋಜನಾ ವೆಚ್ಚದಲ್ಲಿ 5,843 ಮನೆಗಳು ಮಂಜೂರಾಗಿದ್ದು, ಈ ಪೈಕಿ 3,879 ಮನೆಗಳನ್ನು ಪ್ರಾರಂಭಿಸಿದ್ದು, 2,191 ಮನೆಗಳು ಪೂರ್ಣಗೊಂಡಿದ್ದು, 1,688 ಮನೆಗಳು ವಿವಿಧ ಹಂತಗಳಲ್ಲಿ ಪ್ರಗತಿಯಲ್ಲಿವೆ. ಉಳಿದ 1964 ಮನೆಗಳನ್ನು ಪ್ರಾರಂಭಿಸಬೇಕಾಗಿರುತ್ತದೆ.

## ಫಾಸ್ಟ್ ನ್ಯೂಸ್

### ವೀರೇಶ್‌ಗೆ ಸನ್ಮಾನ




» ಚಿತ್ರದುರ್ಗ

ಮೈಸೂರು ವಿಶ್ವವಿದ್ಯಾನಿಲಯದಿಂದ ಗೌರವ ಡಾಕ್ಟರೇಟ್ ಪಡೆದಿರುವ ಬಾಪೂಜಿ ಶಿಕ್ಷಣ ಮಹಾವಿದ್ಯಾಲಯದ ಕೆ.ಎಂ.ವೀರೇಶ್‌ರವರಿಗೆ ಸಂಶೋಧಕ ಡಾ.ಬಿ.ರಾಜಶೇಖರಪ್ಪನವರು ಸಂಸ್ಥೆಯ ಆವರಣದಲ್ಲಿ ಶನಿವಾರ ಅಭಿನಂದಿಸಿ ಶುಭ ಹಾರೈಸಿದರು.ಮೈಸೂರು ಪೇಟ, ಶಾಲು, ಮಣಿ ಹಾರ ಹಾಕಿ ಸನ್ಮಾನಿಸಿದ ಡಾ.ಬಿ.ರಾಜಶೇಖರಪ್ಪನವರು ಶಿಕ್ಷಣ ಕ್ಷೇತ್ರದಲ್ಲಿ ನಿಮ್ಮ ಸೇವೆಯನ್ನು ಗುರುತಿಸಿ ಗೌರವ ಡಾಕ್ಟರೇಟ್ ನೀಡಿರುವುದು ಅರ್ಥಪೂರ್ಣವಾಗಿದೆ ಎಂದು ಶ್ಲಾಘಿಸಿದರು.ಶ್ರೀಮತಿ ಯಶೋಧ ಡಾ.ಬಿ.ರಾಜಶೇಖರಪ್ಪ, ಬಾಪೂಜಿ ಪಬ್ಲಿಕ್ ಸ್ಕೂಲ್‌ನ ನಿರ್ದೇಶಕ ಕೆ.ಎಂ.ಚೇತನ್, ರುದ್ರಪ್ಪ ಹಾಗೂ ಶಿಕ್ಷಕ ಬಳಗದವರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

### ಎಂ.ಕೆ.ತಾಜ್‌ಪೀರ್ ರಕ್ತದಾನ



» ಚಿತ್ರದುರ್ಗ

ರಕ್ತಹೀನತೆಯಿಂದ ಬಳಲುತ್ತಿರುವವರಿಗೆ ರಕ್ತ ಕೊಟ್ಟು ಜೀವ ಕಾಪಾಡುವುದು ಪ್ರತಿಯೊಬ್ಬರ ಕರ್ತವ್ಯ ಎಂದು ಜಿಲ್ಲಾ ಶಸ್ತ್ರ ಚಿಕಿತ್ಸಕರಾದ ಡಾ. ರವೀಂದ್ರನಾಥ್ ಹೇಳಿದರು.ಕರ್ನಾಟಕ ರಾಜ್ಯ ಮಾದಿಗ ಸಮಾಜದ ವತಿಯಿಂದ ಐ.ಎಂ.ಎ.ಹಾಲ್‌ನಲ್ಲಿ ಶನಿವಾರ ಏರ್ಪಡಿಸಲಾಗಿದ್ದ ಎರಡನೆ ವರ್ಷದ ರಕ್ತದಾನ ಶಿಬಿರ ಉದ್ಘಾಟಿಸಿ ಮಾತನಾಡಿದರು.ರಕ್ತದಾನ ಮಹಾದಾನ. ರಕ್ತಕ್ಕೆ ಪರ್ಯಾಯ ಬೇರೆ ಯಾವುದೂ ಇಲ್ಲ. ಅಪಘಾತ, ಹೆರಿಗೆ, ಆಪರೇಷನ್ ಇನ್ನು ಅನೇಕ ತುರ್ತು ಸಂದರ್ಭಗಳಲ್ಲಿ ರಕ್ತದ ಅವಶ್ಯಕತೆಯಿರುತ್ತದೆ. ಹಾಗಾಗಿ ಸಾವು-ಬದುಕಿನ ನಡುವೆ ಹೋರಾಟ ನಡೆಸುತ್ತಿರುವವರಿಗೆ ರಕ್ತ ನೀಡಿ ಅಮೂಲ್ಯವಾದ ಪ್ರಾಣ ಉಳಿಸುವಂತೆ ಸಾರ್ವಜನಿಕರಲ್ಲಿ ವಿನಂತಿಸಿದರು.ಚಿತ್ರದುರ್ಗ ನಗರಾಭಿವೃದ್ಧಿ ಪ್ರಾಧಿಕಾರದ ಆಯುಕ್ತರಾದ ಸೋಮಶೇಖರ್, ಭ್ರಷ್ಟಾಚಾರ ವಿರೋಧಿ ಆಂದೋಲನ ರಾಜ್ಯಾಧ್ಯಕ್ಷ ಹನುಮಂತಪ್ಪ ದುರ್ಗ, ಕರ್ನಾಟಕ ರಾಜ್ಯ ಮಾದಿಗ ಸಮಾಜ ಜಿಲ್ಲಾ ಘಟಕದ ಗೌರವಾಧ್ಯಕ್ಷ ದೇವರಾಜ್, ಅಧ್ಯಕ್ಷ ಟಿ.ಶೇಖರಪ್ಪ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಓ.ಸೋಮಪ್ಪ ಹಾಗೂ ಪದಾಧಿಕಾರಿಗಳು ಈ ಸಂದರ್ಭದಲ್ಲಿ ಹಾಜರಿದ್ದರು.

### ಬಗರ್ ಹುಕ್ಕುಂ ಹಕ್ಕುಪತ್ರ ನೀಡದ ನಿರ್ಲಕ್ಷ್ಯದ ಬಗ್ಗೆ ಹೋರಾಟ : ಹನುಮಂತಪ್ಪ.



» ಚಳ್ಳಕೆರೆ

ಇತ್ತೀಚಿನ ದಿನಗಳಲ್ಲಿ ತಾಲ್ಲೂಕಿನಾದ್ಯಂತ ಬಗರ್ ಹುಕ್ಕುಂ ಸಾಗುವಳಿದಾರರಿಗೆ ಸರ್ಕಾರ ಸಾಗುವಳಿ ಪತ್ರ ನೀಡದೆ ನಿರ್ಲಕ್ಷ್ಯ ವಹಿಸಿದ್ದು, ತಾಲ್ಲೂಕಿನ ಸಾವಿರಾರು ಬಗರ್ ಹುಕ್ಕುಂ ಸಾಗುವಳಿದಾರರು ಸಂಕಷ್ಟಕ್ಕೆ ಸಿಲುಕಿದ್ದಾರೆ. ಸರ್ಕಾರ ಕೂಡಲೇ ಸಮಿತಿ ರಚಿಸಿ ಆಯ್ಕೆಗೊಂಡ ಫಲಾನುಭವಿಗಳಿಗೆ ಜಮೀನು ಹಕ್ಕುಪತ್ರ ನೀಡಬೇಕೆಂದು ಭೂಮಿ ಮತ್ತು ವಸತಿ ವಂಚಿತ ಹೋರಾಟ ಸಮಿತಿ ಜಿಲ್ಲಾ ಮುಖಂಡ ಬಿ.ಹನುಮಂತಪ್ಪ ಸರ್ಕಾರವನ್ನು ಒತ್ತಾಯಿಸಿದ್ದಾರೆ. ಅವರು, ಶನಿವಾರ ನಗರದ ಪ್ರವಾಸಿ ಮಂದಿರದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಭಾಗವಹಿಸಿ ಮಾತನಾಡಿ, ಚಳ್ಳಕೆರೆ ವಿಧಾನಸಭಾ ವ್ಯಾಪ್ತಿಯಲ್ಲಿ ಕಳೆದ ಹತ್ತಾರು ವರ್ಷಗಳಿಂದ ಬಗರ್ ಹುಕ್ಕುಂ ಸಾಗುವಳಿದಾರರಿಗೆ ಹಕ್ಕುಪತ್ರ ನೀಡಿಲ್ಲ. ಈ ಬಗ್ಗೆ ಹಲವಾರು ಬಾರಿ ಹೋರಾಟ ನಡೆಸಿದರೂ ಸಹ ಸರ್ಕಾರದ ಮೊಂಡಾಟ ಮುಂದುವರೆದಿದೆ. ಈ ಹಿನ್ನೆಲೆಯಲ್ಲಿ ಸರ್ಕಾರ ಕೂಡಲೇ ಭೂಮಿ ಹಕ್ಕು ಪತ್ರ ನೀಡದೆ ಇದ್ದಲ್ಲಿ ತಾಲ್ಲೂಕು, ಜಿಲ್ಲಾ ಮಟ್ಟದಲ್ಲಿ ಚಳುವಳಿ ನಡೆಸಲು ನಿರ್ಧರಿಸಿದೆ ಎಂದರು. ಪತ್ರಿಕಾಗೋಷ್ಠಿಯಲ್ಲಿ ತಾಲ್ಲೂಕು ಮುಖಂಡ ಟಿ.ಮಂಜುನಾಥ, ಮಾರಪ್ಪ ಮುಂತಾದವರು ಉಪಸ್ಥಿತರಿದ್ದರು.

**49 ಕೋಟಿ ರೂ. ವೆಚ್ಚದ ಕಾಮಗಾರಿಗೆ ಜಿಲ್ಲಾ ಉಸ್ತುವಾರಿ ಸಚಿವ ಡಿ. ಸುಧಾಕರ್ ರಿಂದ ಶಂಕುಸ್ಥಾಪನೆ**

# ಹರ್ತಿಕೋಟೆ, ಇತರೆ 37 ಹಳ್ಳಿಗೆ ವಿವಿಎಸ್ ನೀರು





» ಚಿತ್ರದುರ್ಗ

ಹರ್ತಿಕೋಟೆ ಹಾಗೂ ಇತರೆ 37 ಹಳ್ಳಿಗಳಿಗೆ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಯಡಿ ವಿ.ವಿ. ಸಾಗರ ಜಲಾಶಯದಿಂದ ಎಲೆಂಟು ತಿಂಗಳ ಒಳಗಾಗಿ ಶುದ್ಧ ಕುಡಿಯುವ ನೀರು ಪೂರೈಸಲು ಅಗತ್ಯವಿರುವ ಎಲ್ಲ ಕ್ರಮಗಳನ್ನು ಕೈಗೊಳ್ಳಲಾಗುವುದು ಎಂದು ಯೋಜನೆ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಡಿ. ಸುಧಾಕರ್ ಅವರು ಭರವಸೆ ನೀಡಿದರು.

ಹಿರಿಯೂರು ತಾಲ್ಲೂಕು ಹರ್ತಿಕೋಟೆ ಗ್ರಾಮದಲ್ಲಿ ಶನಿವಾರದಂದು ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಯಡಿ ಹರ್ತಿಕೋಟೆ ಮತ್ತು ಇತರೆ 37 ಗ್ರಾಮಗಳಿಗೆ 49 ಕೋಟಿ ರೂ. ವೆಚ್ಚದಲ್ಲಿ ವಿ.ವಿ. ಸಾಗರ ಜಲಾಶಯದಿಂದ ಶುದ್ಧೀಕರಿಸಿದ ಕುಡಿಯುವ ನೀರು ಒದಗಿಸುವ ಕಾಮಗಾರಿಗೆ ಶಂಕುಸ್ಥಾಪನೆ ಹಾಗೂ ಗ್ಯಾರಂಟಿ ಯೋಜನೆಗಳ ಫಲಾನುಭವಿಗಳ ಸಮಾವೇಶ ಉದ್ಘಾಟಿಸಿ ಅವರು ಮಾತನಾಡಿದರು.

ನೀರು, ಸೂರು ಮತ್ತು ಶಿಕ್ಷಣ ಈ ಮೂರು ಅಂಶಗಳು ಪ್ರತಿಯೊಬ್ಬರ ಜೀವನದಲ್ಲಿ ಬಹು ಮುಖ್ಯವಾಗಿದ್ದು, ನಮ್ಮ ಸರ್ಕಾರ ಈ ಮೂರು ಅಂಶಗಳಿಗೆ ಹೆಚ್ಚಿನ ಆದ್ಯತೆ ನೀಡುತ್ತಿದೆ. ಕಳೆದ 2008 ರಲ್ಲಿ ತಾವು ಶಾಸಕರಾಗಿ, ಸಚಿವರಾದ ಸಂದರ್ಭದಲ್ಲಿ ಗ್ರಾಮಗಳಿಗೆ ಭೇಟಿ ನೀಡುವಾಗ, ಹರ್ತಿಕೋಟೆ, ಐಮಂಗಲ ಭಾಗದ ಜನರು ಕುಡಿಯುವ ನೀರಿಗಾಗಿ ತೀವ್ರ ತೊಂದರೆ ಇರುವ ಬಗ್ಗೆ ತಮ್ಮ ಅಳಲು ತೋಡಿಕೊಳ್ಳುತ್ತಿದ್ದರು. ಹೀಗಾಗಿ ಆ ಸಂದರ್ಭದಲ್ಲಿಯೇ ಐಮಂಗಲ ಮತ್ತಿತರ 40 ಗ್ರಾಮಗಳಿಗೆ ವಿ.ವಿ. ಸಾಗರದಿಂದ ಶುದ್ಧ ನೀರು ಪೂರೈಸಲು ಸರ್ಕಾರದಿಂದ ಅನುಮೋದನೆ ಪಡೆಯಲಾಗಿತ್ತು. ಆದರೆ ಅರಣ್ಯ ಇಲಾಖೆಯ ಕ್ಲಿಯರೆನ್ಸ್ ಮತ್ತಿತರ ಅಡೆ ತಡೆಗಳಿಂದ 10 ವರ್ಷ ವಿಳಂಬವಾಗಿತ್ತು. ಕಳೆದ ಚುನಾವಣೆ ಸಂದರ್ಭದಲ್ಲಿ ತಾವು ಸೋತ ಬಳಿಕ, ಈ ಯೋಜನೆ ಬಹುತೇಕ ನೆನೆಗುದಿಗೆ ಬಿದ್ದಿತ್ತು. ತಾವು ಮತ್ತೆ ಶಾಸಕರಾಗಿ, ಸಚಿವರಾದ ಬಳಿಕವೇ, ಈ ಯೋಜನೆಗೆ ಮತ್ತೆ ಚಾಲನೆ ನೀಡಿ, ಐಮಂಗಲ ಮತ್ತಿತರ ಗ್ರಾಮಗಳಿಗೆ ಈಗಾಗಲೆ ವಿವಿ ಸಾಗರದಿಂದ ಶುದ್ಧ ನೀರು ಪೂರೈಸುವ ಕೆಲಸ ಪೂರ್ಣಗೊಳಿಸಿ, ನೀರು ನೀಡುತ್ತಿದ್ದೇವೆ. ಈಗಾಗಲೆ ಹರ್ತಿಕೋಟೆ ಗ್ರಾಮದವರೆಗೆ ವಿವಿ ಸಾಗರದಿಂದ ನೀರು ಹರಿದುಬಂದಿದ್ದು, ಇದೀಗ ಈ ಭಾಗದ ಯರಬಳ್ಳಿ, ಬಬ್ಬೂರು, ಹೊಸ ಯಳನಾಡು, ಗನ್ನಾಯಕನಹಳ್ಳಿ, ಮಸ್ಕಲ್, ಬ್ಯಾಡರಹಳ್ಳಿ ಸೇರಿದಂತೆ 07 ಗ್ರಾಮ ಪಂಚಾಯತಿಗಳ ವ್ಯಾಪ್ತಿಯ ಒಟ್ಟು 38 ಗ್ರಾಮಗಳಿಗೆ ವಿ.ವಿ. ಸಾಗರದಿಂದ ಶುದ್ಧ ನೀರು ಪೂರೈಸುವ ಯೋಜನೆಗೆ ಶಂಕುಸ್ಥಾಪನೆ ನೆರವೇರಿಸಿದ್ದೇನೆ. ಶೀಘ್ರದಲ್ಲಿಯೇ ಇದೇ ಭಾಗದಲ್ಲಿ ಫಿಲ್ಟರ್ ಹೌಸ್ ನಿರ್ಮಿಸಿ, ಶುದ್ಧೀಕರಿಸಿದ ನೀರನ್ನು ಈ ಎಲ್ಲ ಗ್ರಾಮಗಳಿಗೆ ಇನ್ನು ಎಲೆಂಟು ತಿಂಗಳುಗಳಲ್ಲಿ ಪೂರೈಸಲು ಎಲ್ಲ ಕ್ರಮಗಳನ್ನು ಕೈಗೊಳ್ಳಲಾಗುವುದು. ಅದೇ ರೀತಿ ಹಿರಿಯೂರು ತಾಲ್ಲೂಕಿನ ಎಲ್ಲ ಗ್ರಾಮಗಳಿಗೂ ವಿ.ವಿ. ಸಾಗರದಿಂದ ಶುದ್ಧ ಕುಡಿಯುವ ನೀರು ಪೂರೈಸುವ ಗುರಿ ತಮ್ಮದಾಗಿದೆ ಎಂದು ಸಚಿವರು ಹೇಳಿದರು.

ಕುವೆಂಪು ಅವರು ಹೇಳಿರುವಂತೆ ನಮ್ಮ ರಾಜ್ಯ ಸರ್ವ ಜನಾಂಗದ ಶಾಂತಿಯ ತೋಟ, ಆದರೆ ಕೆಲವರು ಜಾತಿ, ಧರ್ಮಗಳ ನಡುವೆ ತಂದಿಟ್ಟು, ಅಶಾಂತಿ ಸೃಷ್ಟಿಸುವ ಕೆಲಸ ಮಾಡುತ್ತಿದ್ದಾರೆ. ಅಪಪ್ರಚಾರಗಳನ್ನು ಜನ ನಂಬಬಾರದು, ಸತ್ಯಾಸತ್ಯತೆ ವಿಮರ್ಶಿಸುವ ಪ್ರಜ್ಞೆ ಸಾರ್ವಜನಿಕರಲ್ಲಿದೆ ಎಂದರು.

ಉಚಿತ ವಿದ್ಯುತ್, ಉಚಿತ ಅಕ್ಕಿ, ಹೆಣ್ಣುಮಕ್ಕಳಿಗೆ ಉಚಿತ ಪ್ರಯಾಣ ಹಾಗೂ 2 ಸಾವಿರ ರೂ. ಸಹಾಯಧನ, ಯುವಕರಿಗೆತಮ್ಮಭವಿಷ್ಯರೂಪಿಸಿಕೊಳ್ಳಲು ನೀಡಿರುವಂತಹ ಗ್ಯಾರಂಟಿ ಯೋಜನೆಗಳು ಜನಪರ ಮತ್ತು ಬಡವರ ಪರವಾದಂತಹ ಯೋಜನೆಗಳಾಗಿದ್ದು, ಗ್ಯಾರಂಟಿ ಯೋಜನೆಗಳ ಅನುಷ್ಠಾನಕ್ಕಾಗಿಯೇ ವಾರ್ಷಿಕ ಸುಮಾರು 65 ಸಾವಿರ ಕೋಟಿ ರೂ.ಗಳನ್ನು ಮೀಸಲಿರಿಸಲು ಕ್ರಮ ವಹಿಸಿದ್ದೇವೆ, ನಮ್ಮದು ನುಡಿದಂತೆ ನಡೆದ ಸರ್ಕಾರವಾಗಿದೆ ಎಂದು ಸಚಿವ ಡಿ. ಸುಧಾಕರ್ ಹೇಳಿದರು.

ಹರ್ತಿಕೋಟೆ ಗ್ರಾಮ ಪಂಚಾಯತ್ ಅಧ್ಯಕ್ಷ ಪ್ರತಾಪ್ ಸಿಂಹ ಅವರು ಮಾತನಾಡಿ, ಈಗಿನ ಸರ್ಕಾರ ಬಡವರನ್ನು, ಬಡತನದಿಂದ ಮೇಲೆತ್ತುವ ಸಲುವಾಗಿ ಗ್ಯಾರಂಟಿ ಯೋಜನೆಗಳನ್ನು ಜಾರಿಗೊಳಿಸಿದೆ. ಯುವನಿಧಿ ಯೋಜನೆಯ ಸೌಲಭ್ಯ ಪಡೆಯುವ ಯುವ ಜನರು, ಸಹಾಯಧನವನ್ನು ದುಂಧು ವೆಚ್ಚಕ್ಕೆ ಅಥವಾ ದುಶ್ಚಟಗಳಿಗೆ ಬಳಸದೆ, ತಮ್ಮ ಭವಿಷ್ಯ ರೂಪಿಸಿಕೊಳ್ಳಲು ಸದ್ವಿನಿಯೋಗ ಮಾಡಿಕೊಳ್ಳಬೇಕು. ಗೃಹಲಕ್ಷ್ಮಿ, ಗೃಹಜ್ಯೋತಿ, ಶಕ್ತಿ, ಅನ್ನಭಾಗ್ಯ ಯೋಜನೆಯಡಿ ದೊರೆಯುವ ಹಣವನ್ನು ಉಳಿಸಿಕೊಂಡು, ಮಹಿಳೆಯರು ತಮ್ಮ ಕುಟುಂಬದ ಬದುಕನ್ನು ಉಜ್ವಲಗೊಳಿಸಿಕೊಳ್ಳಬೇಕು ಎಂದು ಮನವಿ ಮಾಡಿದರು.

ತಹಸಿಲ್ದಾರ್ ರಾಜೇಶ್ ಪ್ರಾಸ್ತಾವಿಕವಾಗಿ ಮಾತನಾಡಿ, ಗೃಹಲಕ್ಷ್ಮಿ ಯೋಜನೆಯಡಿ ತಾಲ್ಲೂಕಿನಲ್ಲಿ 66094 ಮಹಿಳೆಯರು ಸೌಲಭ್ಯ ಪಡೆದಿದ್ದು, ಶೇ. 99 ರಷ್ಟು ಮಹಿಳೆಯರು ಫಲಾನುಭವಿಗಳಾಗಿದ್ದಾರೆ. ಅನ್ನಭಾಗ್ಯ ಯೋಜನೆಯಡಿ 64 ಸಾವಿರಕ್ಕೂ ಹೆಚ್ಚು ಕುಟುಂಬಗಳು ಉಚಿತ ಅಕ್ಕಿ/ಸಹಾಯಧನ ಪಡೆಯುತ್ತಿದ್ದಾರೆ. ಗೃಹಜ್ಯೋತಿ ಯೋಜನೆಯಡಿ 63 ಸಾವಿರಕ್ಕೂ ಹೆಚ್ಚು ಕುಟುಂಬಗಳು ಉಚಿತ ವಿದ್ಯುತ್ ಪಡೆಯುತ್ತಿದ್ದರೆ, ಯುವನಿಧಿ ಯೋಜನೆಗಾಗಿ ತಾಲ್ಲೂಕಿನ 617 ವಿದ್ಯಾರ್ಥಿಗಳು ನೊಂದಣಿ ಮಾಡಿಕೊಂಡಿದ್ದಾರೆ ಎಂದರು.

ಗ್ಯಾರಂಟಿ ಯೋಜನೆ ಬಗ್ಗೆ ಫಲಾನುಭವಿ ಭಾಗ್ಯಮ್ಮ ಹರ್ತಿಕೋಟೆ ಅನಿಸಿಕೆ ವ್ಯಕ್ತಪಡಿಸಿ, ಗೃಹಲಕ್ಷ್ಮಿ ಯೋಜನೆಯಡಿ ತಮಗೆ ತಿಂಗಳಿಗೆ 2 ಸಾವಿರ ರೂ. ದೊರೆಯುತ್ತಿದ್ದು, ಇದರಿಂದ ತಮ್ಮ ಅನಾರೋಗ್ಯದ ಚಿಕಿತ್ಸೆಗೆ ಇತರರಲ್ಲಿ ಹಣಕ್ಕಾಗಿ ಕೈಚಾಚುವ ಪರಿಸ್ಥಿತಿ ದೂರವಾಗಿದೆ, ಮನೆ ಮಂದಿ ಉತ್ತಮ ಹಣ್ಣು, ತರಕಾರಿ ಖರೀದಿಸಿ, ಪೌಷ್ಠಿಕತೆ ಹೆಚ್ಚಿಸಿಕೊಳ್ಳಲು ಸಹಕಾರಿಯಾಗಿದೆ. ಉಚಿತ ವಿದ್ಯುತ್, ಉಚಿತ ಪ್ರಯಾಣ, ಉಚಿತ ಅಕ್ಕಿ ಪೂರೈಕೆಯಂತಹ ಯೋಜನೆಯಿಂದ ಉಳಿತಾಯವಾಗುವ ಹಣ ಮಕ್ಕಳ ವಿದ್ಯಾಭ್ಯಾಸಕ್ಕೆ, ಮನೆಯ ಇತರೆ ಖರ್ಚಿಗೆ ಅನುಕೂಲವಾಗಿದೆ ಎಂದರು. ಇನ್ನೋರ್ವ ಫಲಾನುಭವಿ ಮಲ್ಲಿಕಾ ಮಸ್ಕಲ್‌ಮಟ್ಟಿ ಅಭಿಪ್ರಾಯಿಸಿ, ಅನ್ನಭಾಗ್ಯ ಯೋಜನೆಯಿಂದ ತಮ್ಮ ಕುಟುಂಬ ಮೂರೊತ್ತು ನೆಮ್ಮದಿಯಿಂದ ಊಟ ಮಾಡುವಂತಾಗಿದೆ, ಶಕ್ತಿ ಯೋಜನೆಯಿಂದ ಇದುವರೆಗೂ ತಾವು ನೋಡದಿರವ ರಾಜ್ಯದ ವಿವಿಧ ದೇವಸ್ಥಾನಗಳ ಸ್ಥಳಗಳಿಗೆ ಉಚಿತವಾಗಿ ಪ್ರಯಾಣಿಸಿ, ನೋಡಿಕೊಂಡು ಬಂದಿದ್ದೇನೆ ಎಂದರು.

ಕಾರ್ಯಕ್ರಮದಲ್ಲಿ ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಸತೀಶ್ ಕುಮಾರ್, ಮುಖಂಡರಾದ ರಮೇಶ್, ಕೃಷ್ಣಮೂರ್ತಿ, ಬಿ. ಮಹಾಂತೇಶ್ ಸೇರಿದಂತೆ ವಿವಿಧ ಗ್ರಾ.ಪಂ. ಗಳ ಅಧ್ಯಕ್ಷರು, ಉಪಾಧ್ಯಕ್ಷರು, ಸದಸ್ಯರುಗಳು, ಗಣ್ಯರು ಉಪಸ್ಥಿತರಿದ್ದರು.

## ಬೇಡರೆಡ್ಡಿಹಳ್ಳಿ ಗ್ರಾಮದಲ್ಲಿ ಅಗ್ನಿ ಆಕಸ್ಮಿಕ ರಾಗಿ ಬಣವೆ, ಗುಡಿಸಲು ಬೆಂಕಿಗೆ ಆಹುತಿ ಸಾವಿರಾರು ರೂ ನಷ್ಟ



» ಚಳ್ಳಕೆರೆ

ಬೇಸಿಗೆಯ ಸುಡುಬಿಸಿಲಿನ ಹಿನ್ನೆಲೆಯಲ್ಲಿ ಅಗ್ನಿಅನಾಹುತಗಳು ನಿರಂತರ ನಡೆಯುತ್ತಿದ್ದು, ಇವುಗಳನ್ನು ತಡೆಯುವ ನಿಟ್ಟಿನಲ್ಲಿ ಸಾರ್ವಜನಿಕರು ಜಾಗೃತೆ ವಹಿಸಬೇಕಿದೆ. ಅಗ್ನಿ ಅವಘಡಗಳಲ್ಲಿ ಬಹುತೇಕ ಎಲ್ಲರವನ್ನೂ ಕಳೆದುಕೊಂಡು ನಿರ್ಗತಿಕರಾದ ಜನಸಾಮಾನ್ಯರಿಗೆ ಸರ್ಕಾರ ನೆರವು ನೀಡಬೇಕೆಂದು ಗ್ರಾಮಸ್ಥರ ಒತ್ತಾಯವಾಗಿದೆ.

ತಳಕು ಹೋಬಳಿಯ ರೇಣುಕಾಪುರ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಕಸವಿಗೊಂಡನಹಳ್ಳಿ ಗ್ರಾಮದ ನರಸಿಂಹಪ್ಪ ಎಂಬುವವರ ಗುಡಿಸಲಿಗೆ ಆಕಸ್ಮಿಕ ಬೆಂಕಿ ಬಿದ್ದು ಗುಡಿಸಲು ಬೆಂಕಿಗೆ ಆಹುತಿಯಾಗಿ ಗುಡಿಸಲಲ್ಲಿದ್ದ ರಾಗಿ, ಅಕ್ಕಿ, ಶೇಂಗಾ ಮುಂತಾದ ಆಹಾರ ಪದಾರ್ಥಗಳು ಬೆಂಕಿಯಲ್ಲಿ ಸುಟ್ಟು ಸುಮಾರು 50ಕ್ಕೂ ಹೆಚ್ಚು ನಷ್ಟ ಸಂಭವಿಸಿದೆ ಎಂದು ಗ್ರಾಮ ಲೆಕ್ಕಾಧಿಕಾರಿ ತಿಳಿಸಿದ್ದಾರೆ. ಮತ್ತೊಂದು ಪ್ರಕರಣದಲ್ಲಿ ತಳಕು ಹೋಬಳಿಯ ಬೇಡರೆಡ್ಡಿಹಳ್ಳಿ ಗ್ರಾಮದ ರಘುನಾಥರೆಡ್ಡಿ ಎಂಬುವವರ ರಾಗಿ ಹುಲ್ಲಿನ ಬಣವೆಗೆ ಭಾನುವಾರ ಮಧ್ಯಾಹ್ನ ಬಿದ್ದ ಆಕಸ್ಮಿಕ ಬೆಂಕಿಗೆ ರಾಗಿ ಹುಲ್ಲಿನ ಬಣವೆ ಸಂಪೂರ್ಣ ಸುಟ್ಟು ಸುಮಾರು 50 ಸಾವಿರಕ್ಕೂ ಹೆಚ್ಚು ನಷ್ಟ ಸಂಭವಿಸಿದೆ. ಗ್ರಾಮ ಲೆಕ್ಕಾಧಿಕಾರಿ ಸ್ಥಳಕ್ಕೆ ಭೇಟಿ ನೀಡಿ ಹಿರಿಯ ಅಧಿಕಾರಿಗಳಿಗೆ ವರದಿ ನೀಡಿದ್ದಾರೆ.

## ಕರುನಾಡ ವಿಜಯಸೇನೆಯಿಂದ ಸಾರ್ವಜನಿಕರ ಹಿತರಕ್ಷಣೆಗೆ ಪ್ರಾಮಾಣಿಕ ಯತ್ನ: ಜಿಲ್ಲಾಧ್ಯಕ್ಷ



» ಚಳ್ಳಕೆರೆ

ಜಿಲ್ಲೆಯಾದ್ಯಂತಕರುನಾಡುವಿಜಯಸೇನೆಯಕಾರ್ಯಚಟುವಟಿಕೆಗಳನ್ನು ವಿಸ್ತರಿಸಲು ರಾಜ್ಯಾಧ್ಯಕ್ಷ ಎಚ್.ಎನ್.ದೀಪಕ್ ಮಾರ್ಗದರ್ಶನದಲ್ಲಿ ಸಂಘಟನೆಯನ್ನು ಆರಂಭಿಸಿದ್ದು, ಚಳ್ಳಕೆರೆ ತಾಲ್ಲೂಕು ಸೇರಿದಂತೆ ಜಿಲ್ಲೆಯ ಎಲ್ಲಾ ತಾಲ್ಲೂಕು ಕೇಂದ್ರಗಳಲ್ಲಿ ಕರುನಾಡು ವಿಜಯ ಸೇನೆ ಘಟಕ ಸ್ಥಾಪಿಸಿ ಸಾರ್ವಜನಿಕರ ಹಿತರಕ್ಷಣೆ, ಸಮಸ್ಯೆಗಳ ಬಗ್ಗೆ ಹೋರಾಟ ನಡೆಸುವುದಾಗಿ ಜಿಲ್ಲಾಧ್ಯಕ್ಷ ಕೆ.ಟಿ.ಶಿವಕುಮಾರ್ ತಿಳಿಸಿದರು. ಅವರು, ' ಪ್ರವಾಸಿ ಮಂದಿರದಲ್ಲಿ ಕರುನಾಡು ವಿಜಯಸೇನೆಯ ಪದಾಧಿಕಾರಿಗಳ ಆಯ್ಕೆ ಸಭೆಯಲ್ಲಿ ಭಾಗವಹಿಸಿ ಮಾತನಾಡಿ, ಯುವಕರು, ಮಹಿಳೆಯರು ಹೆಚ್ಚಿನ ಸಂಖ್ಯೆಯಲ್ಲಿಸಂಘಟನೆಗೆ ಸೇರ್ಪಡೆಯಾಗುವಂತೆ ಮನವಿ ಮಾಡಿದರು.

**ಪ್ರಮುಖ ಸುದ್ದಿ**

**ಮನೆ ಬಾಗಿಲಿಗೆ ಸೌಲಭ್ಯ, ಗ್ಯಾರಂಟಿ ಮುಟ್ಟಿಸುವ ಕೆಲಸ, ಕಾಲುವೆ ಕೊನೆ ಭಾಗದ ರೈತರಿಗೆ ನೀರು ತಲುಪಿಸಲು ಕಟ್ಟುನಿಟ್ಟಿನ ಕ್ರಮ; ಎಸ್.ಎಸ್.ಮಲ್ಲಿಕಾರ್ಜುನ್**

# ದೊಡ್ಡಬಾತಿ ಗ್ರಾಮದಲ್ಲಿ ಸಚಿವರಿಂದ ಜನತಾ ದರ್ಶನ



» ದಾವಣಗೆರೆ

ಜನರಿಗೆ ಜನಸ್ನೇಹಿ ಆಡಳಿತ ನೀಡುವ ಮೂಲಕ ಮನೆ ಬಾಗಿಲಿಗೆ ಸೌಲಭ್ಯ ಕಲ್ಪಿಸುವ ಜೊತೆಗೆ ಪಂಚ ಗ್ಯಾರಂಟಿಗಳನ್ನು ಅರ್ಹ ಎಲ್ಲರಿಗೂ ಮುಟ್ಟಿಸುವ ಕೆಲಸವನ್ನು ಮಾಡಲಾಗುತ್ತದೆ ಎಂದು ಗಣಿ ಮತ್ತು ಭೂ ವಿಜ್ಞಾನ, ತೋಟಗಾರಿಕೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್. ಎಸ್.ಮಲ್ಲಿಕಾರ್ಜುನ್ ತಿಳಿಸಿದರು.

ಅವರು ಭಾನುವಾರ ದಾವಣಗೆರೆ ತಾ; ದೊಡ್ಡಬಾತಿ ಗ್ರಾಮದಲ್ಲಿ ಜಿಲ್ಲಾ ಅಡಳಿತ, ಜಿಲ್ಲಾ ಪಂಚಾಯತ್ ಹಾಗೂ ಗ್ರಾಮ ಪಂಚಾಯಿತಿ ದೊಡ್ಡಬಾತಿ ಹಾಗೂ ಹಳೆಬಾತಿ ಗ್ರಾಮ ಪಂಚಾಯಿತಿಯ ಸಂಯುಕ್ತಾಶ್ರಯದಲ್ಲಿ ಏರ್ಪಡಿಸಲಾದ ಜಿಲ್ಲಾ ಮಟ್ಟದ ಜನತಾ ದರ್ಶನ ಕಾರ್ಯಕ್ರಮದಲ್ಲಿ ಭಾಗವಹಿಸಿ ಜನರಿಂದ ಅಹವಾಲು ಸ್ವೀಕಾರ, ವಿವಿಧ ಸರ್ಕಾರಿ ಸೌಲಭ್ಯಗಳ ವಿತರಣೆ ಹಾಗೂ ವಿವಿಧ ಕಾಮಗಾರಿಗಳಿಗೆ ಶಂಕುಸ್ಥಾಪನೆ ನೆರವೇರಿಸಿ ಕಾರ್ಯಕ್ರಮದಲ್ಲಿ ಮಾತನಾಡಿದರು.

ಜನರ ಸಮಸ್ಯೆಗಳು, ಕುಂದುಕೊರತೆಗಳನ್ನುಇತ್ಯಾರ್ಥ ಮಾಡುವ ಉದ್ದೇಶದಿಂದ ಅಧಿಕಾರಿಗಳ ತಂಡವೇ ಜನರ ಮನೆ ಬಾಗಿಲಿಗೆ ಬಂದು ಅರ್ಜಿ ಪಡೆದು ಸರ್ಕಾರದ ಸೌಲಭ್ಯ ಕಲ್ಪಿಸುವ ಮೂಲಕ ಜನರ ಕುಂದುಕೊರತೆಗಳಿಗೆ ಸ್ಪಂದಿಸಲಾಗುತ್ತಿದೆ. ಸರ್ಕಾರ ಐದು ಗ್ಯಾರಂಟಿ ಯೋಜನೆಗಳನ್ನು ನೀಡಿದ್ದು ಇದು ಎಲ್ಲಾ ಕುಟುಂಬಕ್ಕೂ ಸಿಕ್ಕಿದೆ. ಆದರೆ ಯಾವುದೇ ಕುಟುಂಬ, ಫಲಾನುಭವಿಗಳಿಗೆ ಈ ಯೋಜನೆಗಳನ್ನು ಪಡೆಯಲು ಸಾಧ್ಯವಾಗದಿದ್ದಲ್ಲಿ ಅವರಿಗೆ ತಕ್ಷಣವೇ ಮುಟ್ಟಿಸುವ ಕೆಲಸ ಮಾಲಾಗುತ್ತದೆ ಎಂದರು.

ಕಾಲುವೆ ಕೊನೆ ಭಾಗಕ್ಕೆ ನೀರು; ಭದ್ರಾ ಬಲದಂಡೆ ನಾಲೆಯಿಂದ ಕಾಲುವೆಗಳಿಗೆ ಫೆಬ್ರವರಿ 16 ರಿಂದ 28 ರ ವರೆಗೆ ನೀರು ಹರಿಸಿದ ವೇಳೆ ಕಾಲುವೆಯಲ್ಲಿ ಅನಧಿಕೃತ ಪಂಪ್‌ಸೆಟ್ ಅಳವಡಿಸಿದ ಕಾರಣ ಕೊನೆ ಭಾಗದ ರೈತರಿಗೆ ನೀರು ತಲುಪಲು ಸಾಧ್ಯವಾಗಿಲ್ಲ, ಆದರೂ ಸಹ ಅಧಿಕಾರಿಗಳು ತೆರವು ಕಾರ್ಯಾಚರಣೆ ಮಾಡಿ ನೀರು ತಲುಪಿಸಲು ಕ್ರಮ ಕೈಗೊಂಡಿದ್ದಾರೆ. ಮುಂದಿನ ದಿನಗಳಲ್ಲಿ ಕಾಲುವೆಗೆ ನೀರು ಹರಿಸುವ ವೇಳೆ ಎಲ್ಲಾ ಅನಧಿಕೃತ ಪಂಪ್‌ಸೆಟ್‌ಗಳ ತೆರವು ಮಾಡಿ ಕೊನೆ ಭಾಗದ ರೈತರಿಗೆ ನೀರು ಕೊಡಲು ಕಟ್ಟುನಿಟ್ಟಿನ ಸೂಚನೆಯನ್ನು ನೀಡಿದ ಸಚಿವರು ಅನಧಿಕೃತ ಪಂಪ್‌ಸೆಟ್ ತೆರವು ಕಾರ್ಯಾಚರಣೆಯಲ್ಲಿ ಯಾವುದೇ ಹಸ್ತಕ್ಷೇಪ ಮಾಡುವುದಿಲ್ಲ ಮತ್ತು ಯಾವುದೇ ಮುಲಾಜಿಗೆ ಮಣಿಯದೇ ನೀರಿನ ಸೋರಿಕೆಗೆ ಕಡಿವಾಣ ಹಾಕುವ ಮೂಲಕ ಕೊನೆ ಭಾಗದ ರೈತರಿಗೆ ನೀರು ತಲುಪಿಸಲಾಗುತ್ತದೆ ಎಂದರು.

ಬರ ನಿರ್ವಹಣೆ; ಮುಂಗಾರು, ಹಿಂಗಾರು ಮಳೆಯ ಕೊರತೆ ಮತ್ತು ಜಲಾಶಯದಲ್ಲಿ ನೀರಿನ ಸಂಗ್ರಹದ ಕೊರತೆಯ ಕಾರಣದಿಂದ ಸುಡು ಬೇಸಿಗೆಯಲ್ಲಿ ಕುಡಿಯುವ ನೀರಿನ ಸಮಸ್ಯೆ ಎದುರಿಸಲು ಅಗತ್ಯವಿದ್ದಲ್ಲಿ ಹೊಸ ಕೊಳವೆಬಾವಿ ಕೊರೆಯಿಸಲು ಮತ್ತು ಬಾಡಿಗೆ ಆಧಾರದ ಮೇಲೆ ಕೊಳವೆಬಾವಿಗಳನ್ನ ಪಡೆಯುವ ಮೂಲಕ ಬೇಸಿಗೆ ನಿರ್ವಹಣೆ ಮಾಡಬೇಕಾಗಿದೆ. ಯಾವುದೇ ಗ್ರಾಮದಲ್ಲಿ ಕುಡಿಯುವ ನೀರಿನ ಸಮಸ್ಯೆ, ಅಭಾವ ಇದೆ ಎಂದು ದೂರುಗಳು ಬರಬಾರದು. ಚನ್ನಗಿರಿ, ಜಗಳೂರು ಭಾಗದಲ್ಲಿ ಕುಡಿಯುವ ನೀರಿನ ಸಮಸ್ಯೆ ಹೆಚ್ಚಾಗುವ ನಿರೀಕ್ಷೆ ಇದ್ದು ಅಧಿಕಾರಿಗಳು ಮುನ್ನೆಚ್ಚರಿಕೆ ವಹಿಸಿ ಕೆಲಸ ಮಾಡಬೇಕೆಂದರು.


Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T